ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 122

21–10–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 122

## ಕುಟುಂಬ ಕಲಹ; ವರದಾ ನದಿಗೆ ಹಾರಿ ತಾಯಿ ಮಗಳು ಆತ್ಮಹತ್ಯೆ



**ಹಾವೇರಿ:** ವರದಾ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಹಾವೇರಿ ತಾಲೂಕಿನ ವರದಾಹಳ್ಳಿಯಲ್ಲಿ ಭಾನುವಾರ ನಡೆದಿದೆ. ಗಂಡನ ಮನೆಯಲ್ಲಿ ದಿನನಿತ್ಯ ಆಗುತ್ತಿದ್ದ ಭಿನ್ನಾಭಿಪ್ರಾಯ, ಕಲಹದಿಂದ ನೊಂದ 38 ವರ್ಷದ ಸವಿತಾ ನಾಗರಾಜ ಉಳ್ಳಾಗಡ್ಡಿ, ಮಗಳು ಕಾವ್ಯಾ ಇಬ್ಬರೂ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಭಾನುವಾರ ಮಧ್ಯಾಹ್ನ ಸುಮಾರು 3 ಗಂಟೆಯ ಸುಮಾರಿಗೆ ಘಟನೆ ನಡೆದಿದೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಪೊಲೀಸ್ ಇಲಾಖೆ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ದೋಣಿ ಮೂಲಕ ನದಿಯಲ್ಲಿ ಹುಡುಕಾಟ ಪ್ರಾರಂಭಿಸಿದ್ದರು. ಇದೀಗ ಕಾವ್ಯಾ ಅವರ ಮೃತದೇಹ ಪತ್ತೆಯಾಗಿದ್ದು, ಸವಿತಾ ಅವರ ಮೃತದೇಹಕ್ಕಾಗಿ ಹುಡುಕಾಟ ನಡೆದಿದೆ. ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

ಸವಿತಾ ಅವರಿಗೆ ಇಬ್ಬರು ಗಂಡು, ಒಬ್ಬ ಹೆಣ್ಣು ಮಗಳಿದ್ದಾಳೆ. ಇತ್ತೀಚೆಗಷ್ಟೇ ಮಗಳು ಕಾವ್ಯಾ ನವೋದಯ ಪರೀಕ್ಷೆ ಪಾಸಾಗಿದ್ದಳು. ಪ್ರತಿಭಾವಂತೆಯಾಗಿದ್ದಳು. ಆದರೆ, ಮನೆಯಲ್ಲಿ ನಿತ್ಯ ಕಲಹ, ಭಿನ್ನಾಭಿಪ್ರಾಯವಿದ್ದ ಹಿನ್ನೆಲೆಯಲ್ಲಿ ಮನನೊಂದು ತಾಯಿ ಸವಿತಾ ಅವರು ಕಾವ್ಯಾಳನ್ನು ಕರೆದುಕೊಂಡು ಬಂದು ನದಿಗೆ ಹಾರಿದ್ದಾರೆ ಎಂದು ತಿಳಿದುಬಂದಿದೆ. ಹಾವೇರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅ.23 ರಂದು ವೀರರಾಣಿ ಕಿತ್ತೂರು ಚೆನ್ನಮ್ಮ ಜಯಂತ್ಯುತ್ಸವ ಹಾಗೂ ವಿಜಯೋತ್ಸವ ಕಾರ್ಯಕ್ರಮ

**ದಾವಣಗೆರೆ.ಅ.20:** ಜಿಲ್ಲಾಡಳಿತ ಹಾಗೂ ಪಂಚಮಸಾಲಿ ಸಮಾಜದ ವತಿಯಿಂದ ಇದೇ 23ರಂದು ನಗರದ ಕುವೆಂಪು ಕನ್ನಡ ಭವನದಲ್ಲಿ ವೀರರಾಣಿ ಕಿತ್ತೂರು ಚನ್ನಮ್ಮ ಅವರ ಜಯಂತ್ಯುತ್ಸವ ಹಾಗೂ ವಿಜಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜ ಕೂಡಲಸಂಗಮ ಪೀಠ. ದಾವಣಗೆರೆ ಜಿಲ್ಲಾ ಘಟಕದ ಅಧ್ಯಕ್ಷ ಗಂಗಾಧರ್ ಕಾರಿಗನೂರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂ–ದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ, ಹರಿಹರ ಮಾಜಿ ಶಾಸಕರಾದ ಹೆಚ್.ಎಸ್.ಶಿವಶಂಕರ್, ಮಹಿಮಾ ಪಟೇಲ್, ಮುಖಂಡರಾದ ಬಿ.ಜೆ.ಅಜಯ್ ಕುಮಾರ್, ತೇಜಸ್ವಿ ಪಟೇಲ್ ಸೇರಿದಂತೆ ಸಮಾಜದ ಮುಖಂಡರು, ಗಣ್ಯರು ಆಗಮಿಸಲಿದ್ದಾರೆ ಎಂದು ಹೇಳಿದರು.

ವಿಜಯೋತ್ಸವದ ಪ್ರಯುಕ್ತ ಸಮಾಜದ ಜಾಗೃತಿಗಾಗಿ ಅಂದು ಬೆಳಿಗ್ಗೆ 9ಗಂಟೆಗೆ ನಗರದ ಶಿವಯೋಗಿ ಮಂದಿರದಿಂದ ಬೈಕ್ ರ‍್ಯಾಲಿ ಹಮ್ಮಿಕೊಳ್ಳಲಾಗಿದ್ದು, ಮಾಜಿ ಶಾಸಕ ಹೆಚ್.ಎಸ್.ಶಿವಶಂಕರ್ ಚಾಲನೆ ನೀಡಲಿದ್ದಾರೆ.

# ಸಿಂಧೂರಕ್ಕೆ ಪಾಕ್ ತತ್ತರ

**ನವದೆಹಲಿ,ಅ.20–** ಆಪರೇಷನ್ ಸಿಂಧೂರ ಸಂದರ್ಭದಲ್ಲಿ ಮೂರು ಸೇನಾ ಪಡೆಗಳ ಹೊಡೆತಕ್ಕೆ ಪಾಕಿಸ್ತಾನ ತತ್ತರಿಸಿ ಹೋಗಿತ್ತು. ನಮ್ಮ ಸೇನೆಯನ್ನು ಎದುರಿಸಲಾಗದೆ ಪಾಕ್ ಶರಣಾಗತಿಗೆ ಮೊರೆಯಿಟ್ಟಿತು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ನಮ್ಮ ತಂಟೆಗೆ ಬಂದರೆ ಸುಮ್ಮನೆ ಬಿಡುವುದಿಲ್ಲ ಎಂಬುದನ್ನು ಆಪರೇಷನ್ ಸಿಂಧೂರ ಕಾರ್ಯಾಚರಣೆ ಮೂಲಕ ಪಾಕಿಸ್ತಾನಕ್ಕೆ ಖಡಕ್ ಸಂದೇಶ ರವಾನಿಸಲಾಗಿದೆ ಎಂದ ಅವರು ಸೇನಾ ಪಡೆಗಳ ಅದ್ಭುತ ಶೌರ್ಯ ಮತ್ತು ದೃಢಸಂಕಲ್ಪವನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಬೆಳಕಿನ ಹಬ್ಬ ದೀಪಾವಳಿ ಶುಭ ಸಂದರ್ಭದಲ್ಲಿ ಗೋವಾ ರಾಜಧಾನಿ ಪಣಜಿಯಲ್ಲಿ ಐಎನ್‌ಎಸ್ ವಿಕ್ರಾಂತ್‌ನಲ್ಲಿ ನೌಕಾ ಪಡೆಯ ಸಿಬ್ಬಂದಿಯನ್ನು ಉದ್ದೇಶಿಸಿ ಮಾತನಾಡಿದ ಅವರು , ಐಎನ್‌ಎಸ್ ವಿಕ್ರಾಂತ್ ಕೇವಲ ಯುದ್ಧ ನೌಕೆಯಲ್ಲ. 21ನೇ ಶತಮಾನದ ಭಾರತದ ಕಠಿಣ ಪರಿಶ್ರಮ, ಪ್ರತಿಭೆ, ಪ್ರಭಾವ ಹಾಗೂ ಬದ್ಧತೆಗೆ ಸಾಕ್ಷಿಯೆಂದು ಮೋದಿ ಹೇಳಿದರು. ಐಎನ್‌ಎಸ್ ವಿಕ್ರಾಂತ್ ಭಾರತದ ಸಶಸ್ತ್ರ ಪಡೆಗಳ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ.



ಇದು ಆತ್ಮನಿರ್ಭರ ಭಾರತದ ಅತ್ಯುನ್ನತ ಸಂಕೇತವು ಆಗಿದೆ ಎಂದು ವಿಶ್ಲೇಷಿಸಿದರು.

ಐಎನ್‌ಎಸ್ ವಿಕ್ರಾಂತ್‌ನಲ್ಲಿ ನಿನ್ನೆ ಕಳೆದ ರಾತ್ರಿಯನ್ನು ಪದಗಳಲ್ಲಿ ವರ್ಣಿಸುವುದು ಕಷ್ಟ. ನಿಮ್ಮಲ್ಲಿರುವ ಅಗಾಧ ಶಕ್ತಿ ಮತ್ತು ಉತ್ಸಾಹವನ್ನು ಕಂಡಿದೆ. ನೀವು ದೇಶ ಭಕ್ತಿಗೀತೆಗಳನ್ನು ಹಾಡುವುದನ್ನು ನೋಡಿದಾಗ ನಿಮ್ಮ ಹಾಡುಗಳಲ್ಲಿ ಆಪರೇಷನ್ ಸಿಂಧೂರ ನೆನಪಾಗುತ್ತದೆ ಎಂದು ಹೇಳಿದರು.

ಯುದ್ಧ ಭೂಮಿಯಲ್ಲಿ ನಿಂತಿರುವ ಯೋಧರ ಅನುಭವನ್ನು ಯಾವುದೇ ಪದಗಳಲ್ಲಿ ಸಂಪೂರ್ಣವಾಗಿ ಸಾಧ್ಯವಿಲ್ಲ ಎಂಬುದು ತಮ್ಮ ಅರಿವಿಗೆ ಬಂದಿದೆ.

ಹೀಗಾಗಿ ದೀಪಾವಳಿಯನ್ನು ನಿಮ್ಮೊಂದಿಗೆ ಕಳೆದಿದ್ದು ತುಂಬಾ ವಿಶೇಷವಾಗಿದೆ ಎಂದು ಬಣ್ಣಿಸಿದರು.

ಭಾರತವನ್ನು ವಿಶ್ವದ ಪ್ರಮುಖ ರಕ್ಷಣಾ ರಫ್ತುದಾರರ ಪೈಕಿ ಒಂದನ್ನಾಗಿ ಮಾಡುವುದು ಕೇಂದ್ರ ಸರ್ಕಾರದ ಗುರಿಯಾಗಿದೆ. 2014 ರಿಂದ ಇದುವರೆಗೂ 40ಕ್ಕೂ ಹೆಚ್ಚು ಯುದ್ಧ ನೌಕೆಗಳು ಮತ್ತು ಜಲಾಂತರ್ಗಾಮಿ ನಿರ್ಮಿಸಿದ್ದೇವೆ ಎಂದರು.

ಬ್ರಹ್ಮೋಸ್ ಕ್ಷಿಪಣಿ ಹೆಸರು ಕೇಳಿದರೆ ಕೆಲವರ ಹೆಸರುಗಳಲ್ಲಿ ನಡುಕ ಉಂಟು ಮಾಡುತ್ತದೆ ಎಂದು ಪಾಕಿಸ್ತಾನಕ್ಕೆ ಪರೋಕ್ಷ ತಿರುಗೇಟು ನೀಡಿದರು. ಪಾಕ್ ವಿರುದ್ಧ ಪ್ರಯೋಗಿಸಲಾದ ಬ್ರಹ್ಮೋಸ್ ಕ್ಷಿಪಣಿಗೆ ಅನೇಕ ದೇಶಗಳು ಖರೀದಿಸಲು ಉತ್ಸುಕವಾಗಿದೆ ಎಂದು ಹೇಳಿದರು.

ಸ್ವದೇಶಿ ಉತ್ಪಾದನೆಗೆ ಒತ್ತು : ಕಳೆದ ದಶಕದಲ್ಲಿ, ಭಾರತದ ರಕ್ಷಣಾ ವಲಯ ಸ್ವದೇಶಿ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಿದೆ. ಕಳೆದ 11 ವರ್ಷಗಳಲ್ಲಿ ಉತ್ಪಾದನೆ ಮೂರು ಪಟ್ಟು ಹೆಚ್ಚಾಗಿದೆ, ಸರಿಸುಮಾರು ಪ್ರತಿ 40 ದಿನಗಳಿಗೊಮ್ಮೆ ನೌಕಾಪಡೆಗೆ ಹೊಸ ಯುದ್ಧನೌಕೆ ಅಥವಾ ಜಲಾಂತರ್ಗಾಮಿ ಸೇರಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ

### ದೀಪಾವಳಿ ಹಬ್ಬದಂದೆ ಘೋರ ಘಟನೆ:

## ಇಬ್ಬರು ಮಕ್ಕಳನ್ನು ಕೊಂದು ಆತ್ಮಹತ್ಯೆಗೆ ಶರಣಾದ ತಾಯಿ

ನಲ್ಗೊಂಡ ಜಿಲ್ಲೆಯಲ್ಲಿ ಹಬ್ಬದ ದಿನವೇ ಮಹಿಳೆಯೊಬ್ಬರು ಇಬ್ಬರು ಮಕ್ಕಳ ಪ್ರಾಣವನ್ನು ತೆಗೆದು ತಾನು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಳಕಿಗೆ ಬಂದಿದೆ. ಸ್ಥಳೀಯರ ಮಾಹಿತಿಯ ಮೇರೆಗೆ ಸ್ಥಳಕ್ಕೆ ತಲುಪಿದ ಪೊಲೀಸರು, ಶವಗಳನ್ನು ವಶಪಡಿಸಿಕೊಂಡು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಿದ್ದಾರೆ. ಘಟನೆಯ ಕುರಿತು ಪ್ರಕರಣ ದಾಖಲಿಸಲಾಗಿದ್ದು, ಅವರ ಸಾವಿಗೆ ಕಾರಣ ತಿಳಿದು ಬಂದಿದೆ.



ಸೋಮವಾರ ನಲ್ಗೊಂಡ ಜಿಲ್ಲೆಯ ಕೊಂಡಮಲ್ಲೆಪಲ್ಲಿಯಲ್ಲಿ ಈ ದುರಂತ ಬೆಳಕಿಗೆ ಬಂದಿದೆ. ಮೃತರನ್ನು ಕುಂಚಲ ನಾಗಲಕ್ಷ್ಮಿ (27), ಮಗಳು ಅವಂತಿಕಾ (9) ಮತ್ತು ಮಗ ಭುವನ್ ಸಾಯಿ (7) ಎಂದು ಪೊಲೀಸರು ಗುರುತಿಸಿದ್ದಾರೆ. ಆದಾಗ್ಯೂ, ಅವರ ಊರು ಆಂಧ್ರಪ್ರದೇಶದ ಬಾಪಟ್ಲಾ ಜಿಲ್ಲೆಯ ಜನಕರಂ ಗ್ರಾಮ. ಆದರೆ ಅವರು ಕಳೆದ ಕೆಲವು ವರ್ಷಗಳಿಂದ ನಲ್ಗೊಂಡ ಜಿಲ್ಲೆಯ ಕೊಂಡಮಲ್ಲೆಪಲ್ಲಿಯಲ್ಲಿ ವಾಸಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಆದಾಗ್ಯೂ, ಅವರ ಸಾವಿಗೆ ಕೌಟುಂಬಿಕ ಕಲಹ ಕಾರಣ ಎಂದು ಪೊಲೀಸರು ಶಂಕಿಸಿದ್ದಾರೆ. ಕಳೆದ ಕೆಲವು ದಿನಗಳಿಂದ ಗಂಡ ಹೆಂಡತಿ ನಡುವೆ ಜಗಳ ನಡೆಯುತ್ತಿತ್ತು ಎಂದು ಪೊಲೀಸರು ಬಹಿರಂಗಪಡಿಸಿದ್ದಾರೆ. ಅವರ ಸಾವಿಗೆ ಹಿಂದಿನ ದಿನವೂ ಗಂಡ ಹೆಂಡತಿ ನಡುವೆ ಜಗಳ ನಡೆದಿದ್ದು, ಪತಿ ರಾತ್ರಿ ಮನೆಯಿಂದ ಹೊರಗೆ ಹೋಗಿದ್ದರು. ಇದರಿಂದ ತೀವ್ರ ನೊಂದ ನಾಗಲಕ್ಷ್ಮಿ ತನ್ನ ಮಕ್ಕಳೊಂದಿಗೆ ಸಾಯುವ ನಿರ್ಧಾರ ತೆಗೆದುಕೊಂಡಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

# ಅಕ್ಟೋಬರ್ 31ರವರೆಗೆ 'ಜಾತಿ ಗಣತಿ' ಸಮೀಕ್ಷೆ ವಿಸ್ತರಣೆ

**ಬೆಂಗಳೂರು:** ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗವು ನಡೆಸುತ್ತಿರುವ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಮತ್ತೆ ವಿಸ್ತರಿಸಲಾಗಿದೆ. ಇದೀಗ ರಾಜ್ಯಾದ್ಯಂತ ಅಕ್ಟೋಬರ್ 31 ರವರೆಗೆ ಸಮೀಕ್ಷೆ ನಡೆಯಲಿದೆ.

ಇದುವರೆಗೆ ಮನೆ–ಮನೆ ಸಮೀಕ್ಷೆಯಲ್ಲಿ ನಿರ್ಣಾಯಕ ಪಾತ್ರ ವಹಿಸಿದ ಶಿಕ್ಷಕರು, ತಮ್ಮ ಶೈಕ್ಷಣಿಕ ಜವಾಬ್ದಾರಿಗಳಿಗೆ ಮರಳಲಿದ್ದಾರೆ. ಸೆಪ್ಟೆಂಬರ್ 22 ರಂದು (ಜಿಬಿಎ ಪ್ರದೇಶವನ್ನು ಹೊರತುಪಡಿಸಿ) ಪ್ರಾರಂಭವಾದ ಸಮೀಕ್ಷೆಯು ಅಕ್ಟೋಬರ್ 7 ರಂದು ಕೊನೆಗೊಳ್ಳಬೇಕಾಗಿತ್ತು. ಅದನ್ನು ಅಕ್ಟೋಬರ್ 19 ರವರೆಗೆ ವಿಸ್ತರಿಸಲಾಯಿತು. ಇದೀಗ ಮತ್ತೆ ವಿಸ್ತರಿಸಲಾಗಿದೆ.

ಭಾನುವಾರ ಸಂಜೆಯ ವೇಳೆಗೆ, ಗ್ರೇಟರ್ ಬೆಂಗಳೂರು ಅಥಾರಿಟಿ (GBA) ಪ್ರದೇಶವನ್ನು ಹೊರತುಪಡಿಸಿ ರಾಜ್ಯದಾದ್ಯಂತ ಸುಮಾರು 1.43 ಕೋಟಿ ಕುಟುಂಬಗಳಲ್ಲಿ 5.42 ಕೋಟಿ ಜನರ ಸಮೀಕ್ಷೆ ಕಾರ್ಯ ಪೂರ್ಣಗೊಂಡಿದೆ. ಬೆಂಗಳೂರಿನಲ್ಲಿ 56.56 ಲಕ್ಷ ಜನರಿದ್ದು, 18.31 ಲಕ್ಷ ಕುಟುಂಬಗಳನ್ನು ಗಣತಿದಾರರು ಸಂಪರ್ಕಿಸುವುದರೊಂದಿಗೆ ಒಟ್ಟಾರೇ 39.83 ಲಕ್ಷ ಜನರ ಸಮೀಕ್ಷೆ ಕಾರ್ಯ ಆಗಿದ್ದು, ಶೇ. 45. 97 ರಷ್ಟು ಪ್ರಗತಿ ಆಗಿದೆ ಎಂದು ಸರ್ಕಾರದ ಅಂಕಿ ಅಂಶಗಳು ಹೇಳುತ್ತವೆ.

ರಾಜ್ಯ ಸರ್ಕಾರವು ದೀಪಾವಳಿಯ ನಿಮಿತ್ತ ಅಕ್ಟೋಬರ್ 20 ರಿಂದ ಅಕ್ಟೋಬರ್ 22 ರವರೆಗೆ ಸಮೀಕ್ಷೆಯಲ್ಲಿ ಭಾಗವಹಿಸುವ ಎಲ್ಲರಿಗೂ ರಜಾದಿನಗಳನ್ನು ಘೋಷಿಸಿದೆ.ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಮುಖ್ಯಮಂತ್ರಿಗಳ ನಿರ್ದೇಶನದಂತೆ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಅಕ್ಟೋಬರ್ 20, 21 ಹಾಗೂ 22 ರಂದು ಸಮೀಕ್ಷೆಯಲ್ಲಿ ಪಾಲ್ಗೊಳ್ಳುವ ಸಿಬ್ಬಂದಿಗೆ ರಜೆ ನೀಡಲಾಗಿದೆ. ಅ.23 ಮೂರರಿಂದ ಸಮೀಕ್ಷೆ ಪುನಃ ಪ್ರಾರಂಭವಾಗಲಿದೆ. ಆಯಾ ಜಿಲ್ಲಾಧಿಕಾರಿಗಳು ಜಿಲ್ಲೆಯಲ್ಲಿನ ವಿವಿಧ ಇಲಾಖೆಯ ಸಿಬ್ಬಂದಿಗಳನ್ನ ಬಳಸಿ ಅಕ್ಟೋಬರ್ 23 ರಿಂದ 31 ರವರೆಗೆ ಸಮೀಕ್ಷೆ ಕಾರ್ಯವನ್ನ ಪೂರ್ಣಗೊಳಿಸಲಿದ್ದಾರೆ ಎಂದು ಸಭೆ ಬಳಿಕ ಹಿಂದುಳಿದ ವರ್ಗಗಳ ಇಲಾಖೆ ಸಚಿವ ಶಿವರಾಜ ತಂಗಡಗಿ ಸುದ್ದಿಗಾರರಿಗೆ ತಿಳಿಸಿದರು.

ಇದುವರೆಗೆ ಮಂಡ್ಯ, ತುಮಕೂರು, ಹಾವೇರಿ, ಚಿತ್ರದುರ್ಗ, ಉಡುಪಿ, ಚಿಕ್ಕಮಗಳೂರು, ದಾವಣಗೆರೆ ಸೇರಿದಂತೆ ಏಳು ಜಿಲ್ಲೆಗಳು ಶೇ.100ರಷ್ಟು, ಗದಗ, ಕೊಪ್ಪಳ, ಶಿವಮೊಗ್ಗ ಶೇ.99ರಷ್ಟು ಸಮೀಕ್ಷೆ ಆಗಿದೆ. ರಾಯಚೂರು, ಬಾಗಲಕೋಟೆ, ಉತ್ತರ ಕನ್ನಡ, ಹಾಸನ ಜಿಲ್ಲೆಗಳು ಶೇ.97ರಷ್ಟು, ಚಾಮರಾಜನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಶೇ.95ರಷ್ಟು, ರಾಮನಗರ, ಧಾರವಾಡ, ಬೀದರ್‌ನಲ್ಲಿ ಶೇ.86, 88 ಮತ್ತು 79.46 ರಷ್ಟು ಸಮೀಕ್ಷೆ ಆಗಿದ್ದು, ಸ್ವಲ್ಪ ನಿಧಾನಗತಿಯಲ್ಲಿ ಸಾಗಿದೆ. ಇನ್ನೂ ಕೆಲಸ ಬಾಕಿ ಇರುವ ಜಿಲ್ಲೆಗಳಲ್ಲಿ ಮಾತ್ರ ಮುಂದುವರಿಸಲಾಗಿದೆ

## ಮಾನಸಿಕ ಅಸ್ವಸ್ಥನಂತೆ ವರ್ತಿಸುತ್ತಿರುವ ಶಾಸಕ ಹರೀಶ್ ಕೂಡಲೇ ಆಸ್ಪತ್ರೆ ಸೇರಿಕೊಳ್ಳಲಿ: ದಿನೇಶ್ ಕೆ.ಶೆಟ್ಟಿ

**ದಾವಣಗೆರೆ.ಅ.20:** ಬಿ.ಪಿ.ಹರೀಶ್ ಮೊದಲು ಮೋದಿ ಹಾಗೂ ಯಡಿಯೂರಪ್ಪ ಅವರ ಹೆಸರಿನಲ್ಲಿರುವ ನಾಮಫಲಕಗಳನ್ನು ತೆರವುಗೊಳಿಸಿ ನಂತರ ಬೇರೆಯವರ ಬಗ್ಗೆ ಮಾತನಾಡಲಿ ಎಂದು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ.ಶೆಟ್ಟಿ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾನಸಿಕ ಅಸ್ವಸ್ಥನಂತೆ ವರ್ತಿಸುತ್ತಿರುವ ಹರೀಶ್ ಸಾರ್ವಜನಿಕ ಮತ್ತು ಸರ್ಕಾರಿ ಕಟ್ಟಡಗಳಿಗೆ ಇಟ್ಟಿರುವ ಜೀವಂತ ವ್ಯಕ್ತಿಗಳ ಸಾಮಫಲಕಗಳನ್ನು ತೆರವುಗೊಳಿಸುವಂತೆ ಆಗ್ರಹಿಸುತ್ತಿರುವುದನ್ನು ನೋಡಿದರೆ ನಗು ಬರುತ್ತದೆ. ಅವರಿಗೆ ಚಿಕಿತ್ಸೆ ಅವಶ್ಯಕತೆ ಇದೆ ಎಂದರು.

ಜಿಲ್ಲಾಡಳಿತ ತೆರವುಗೊಳಿಸದಿದ್ದರೆ ಬಿಜೆಪಿ



ಪಕ್ಷ ತೆರವುಗೊಳಿಸಲಿದೆ ಎಂದಿದ್ದಾರೆ ಬಿಜೆಪಿಯವರಿಗೆ ನಿಜವಾಗಲೂ ಈ ದೇಶದ ಸಂವಿಧಾನದ ಮೇಲೆ ಗೌರವ ಇದ್ದರೆ ಮೊದಲು ದೇಶದ ವಿವಿಧ ಕಡೆಗಳಲ್ಲಿ ನರೇಂದ್ರ ಮೋದಿ ಅವರ ಹೆಸರು ಮತ್ತು ರಾಜ್ಯದಲ್ಲಿ ಬಿ.ಎಸ್.ಯಡಿಯೂರಪ್ಪನವರ ಹೆಸರಿನ ಬಸ್‌ಸ್ಟ್ಯಾಂಡ್‌ನ ನಾಮಫಲಕವನ್ನು ತೆರವುಗೊಳಿಸಲಿ ಎಂದರು.

ಶಾಸಕ ಬಿ.ಪಿ.ಹರೀಶ್ ಅವರು ಇನ್ನು ಕಾಮಗಾರಿ ಪ್ರಾರಂಭವಾಗದಿದ್ದರೂ ಸಹ ಕಾಮಗಾರಿ ಪ್ರಗತಿಯಲ್ಲಿದೆ ಎಂಬ ನಾಮಫಲಕ ಹಾಕಿಸಿಕೊಂಡಿರುವುದನ್ನು ನೋಡಿದರೆ ಪರೀಶ್ ಅವರಿಗೆ ಎನ್ನು ಪ್ರಚಾರದ ಗೀಳು ಇದೆ ಎಂಬುದನ್ನು ತೋರಿಸುತ್ತದೆ. ಹರಿಹರದಲ್ಲಿ ಸಾಕಷ್ಟು ರಸ್ತೆಗಳು ಹಾಳಾಗಿದ್ದು, ಅವುಗಳನ್ನು ದುರಸ್ತಿ ಪಡಿಸುವ ಕೆಲಸ ಮಾಡಲಿ ಎಂದು ಸಲಹೆ ನೀಡಿದರು.

ದಾವಣಗೆರೆಯಲ್ಲಿ ಕೋಮುಸಾಮರಸ್ಯವನ್ನು ಕದಡಿದ ವೇಳೆ ಮೃತರಾದ ಎಲ್ಲಾ ಕುಟುಂಬಗಳಿಗೆ ಮಲ್ಲಿಕಾರ್ಜುನ್ ಅವರು ವೈಯಕ್ತಿಕವಾಗಿ ಸಹಾಯ ಮಾಡಿದ್ದರು. ಇದು ನಡೆದು 30 ವರ್ಷಗಳೇ ಆಗಿವೆ. ಬಿಜೆಪಿಗರಿಗೆ ಈಗ ಅವರ ಕುಟುಂಬಗಳು ನೆನಪಿಗೆ ಬಂದಿವೆ. ಇದು ಕೇವಲ ರಾಜಕೀಯ ನಾಟಕ ಅವರ ಹೆಸರಿನಲ್ಲಿ ಅಧಿಕಾರಕ್ಕೆ ಬಂದ ಬಿಜೆಪಿಗರು ಕನಿಷ್ಠ ಪಕ್ಷ ಅವರ ಕುಟುಂಬಗಳಿಗೆ ಒಂದು ನಿವೇಶನವನ್ನು ನೀಡಲಿಲ್ಲ ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಎ.ನಾಗರಾಜ್, ಕೆ.ಜಿ.ಶಿವಕುಮಾರ್, ಅನಿತಾ ಬಾಯಿ, ವರುಣ್ ಬೆಣ್ಣೆಹಳ್ಳಿ, ಮಂಜುಳಮ್ಮ, ಮಾರುತಿ, ಕುಬೇರಪ್ಪ, ಮಂಜುನಾಥ್ ಇದ್ದರು.

## ಅ.24 ಮತ್ತು 25ರಂದು ಪುಣ್ಯಾರಾಧನೆ ಅಂಗವಾಗಿ ಜನಜಾಗೃತಿ ಧರ್ಮ ಸಮ್ಮೇಳನ



**ದಾವಣಗೆರೆ.ಅ.20:** ಲಿಂ.ವಾಗೀಶ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರ 39ನೇ ವಾರ್ಷಿಕ ಸ್ಮರಣೋತ್ಸವ ಮತ್ತು ಲಿಂ.ಉಮಾಪತಿ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರ ಪುಣ್ಯಾರಾಧನೆ ಅಂಗವಾಗಿ ಜನಜಾಗೃತಿ ಧರ್ಮ ಸಮ್ಮೇಳನ ಕಾರ್ಯಕ್ರಮವನ್ನು ಅ.24 ಮತ್ತು 25ರಂದು ನಗರದ ದಾವಣಗೆರೆ ಹರಿಹರ ಅರ್ಬನ್ ಬ್ಯಾಂಕ್ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಈ ಕುರಿತು ಆವರಗೊಳ್ಳ ಪುರವರ್ಗ ಮಠದ ಓಂಕಾರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ತಮ್ಮ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಅ. 24ರಂದು ಬೆಳಿಗ್ಗೆ 8:30 ರಿಂದ ನಗರದ ಶ್ರೀಶೈಲ ಮಠದ ಶ್ರೀ ಜಗದ್ಗುರು ಪಂಚಾಚಾರ್ಯ ಮಂದಿರದಲ್ಲಿ ಶ್ರೀಶೈಲ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜೆ ಜರಗಲಿದೆ. ಅ. 25ರಂದು ಬೆಳಗ್ಗೆ 8 ಗಂಟೆಗೆ ಕರ್ತೃಗದ್ದಿಗೆ ರುದ್ರಾಭಿಷೇಕ ಪೂಜೆ, ಹೂವಿನ ಅಲಂಕಾರ, ಮಹಾಮಂಗಳಾರತಿ ಮತ್ತು ದೀಕ್ಷಾ ಕಾರ್ಯಕ್ರಮ ನೆರವೇರುವುದು. ನಂತರ ಉಭಯ ಜಗದ್ಗುರುಗಳ ರಜತ ಮೂರ್ತಿಗಳ ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ನಡೆಯಲಿದೆ ತಿಳಿಸಿದರು.

ಅ.24ರಂದು ಸಂಜೆ 6 ಗಂಟೆಗೆ ಶ್ರೀ ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಪ್ರಸನ್ನ ರೇಣುಕ ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ ಮತ್ತು ಶ್ರೀಶೈಲ ಮಹಾಪೀಠದ ಚೆನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯರ ದಿವ್ಯ ಸಾನಿಧ್ಯದಲ್ಲಿ ಮತ್ತು ಹೊನ್ನಾಳಿ ಹಿರೇಕಲ್ ಮಠದ ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿಗಳ ಅಧ್ಯಕ್ಷತೆಯಲ್ಲಿ ಹಾಗೂ ಮುಸ್ಟೂರು ಓಂಕಾರ ಉಚ್ಚನಾಗಲಿಂಗ ಮಠದ ಶ್ರೀ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿಯವರ ಸಮ್ಮುಖದಲ್ಲಿ ಜರುಗುವ ಭಾವೈಕ್ಯ ಜನಜಾಗೃತಿ ಧರ್ಮ ಸಮಾರಂಭವನ್ನು ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಇತರರು ಆಗಮಿಸಲಿದ್ದಾರೆ ಎಂದು ಹೇಳಿದರು.

ಅ.25ರಂದು ಸಂಜೆ 6 ಗಂಟೆಗೆ ನಡೆಯುವ ಭಾವೈಕ್ಯ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಉಜ್ಜಯಿನಿ ಮಹಾಪೀಠದ ಶ್ರೀ ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಸ್ವಾಮೀಜಿ ಮತ್ತು ಶ್ರೀಶೈಲ ಮಹಾಪೀಠದ ಡಾ. ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಮತ್ತು ರಾಮಘಟ್ಟ ಪುರವರ್ಗ ಮಠದ ರೇವಣಸಿದ್ಧ ಶಿವಾಚಾರ್ಯ ಸ್ವಾಮೀಜಿ, ಓಂಕಾರ ಶಿವಾಚಾರ್ಯ ಸ್ವಾಮೀಜಿ ಹಾಗೂ ಹೆಬ್ಬಾಳು ವಿರಕ್ತಮಠದ ಮಹಾಂತರುದ್ರ ಸ್ವಾಮೀಜಿಗಳ ಸಮ್ಮುಖದಲ್ಲಿ ಮತ್ತು ಶಾಸಕ ಶಾಮನೂರು ಶಿವಶಂಕರಪ್ಪನವರ ಅಧ್ಯಕ್ಷತೆಯಲ್ಲಿ ಜರಗಲಿದೆ. ಕೇಂದ್ರ ಮಾಜಿ ಸಚಿವ ಜಿ.ಎಂ ಸಿದ್ದೇಶ್ವರ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಶಾಸಕ ಬಿ.ಪಿ ಹರೀಶ್, ಮಾಜಿ ಶಾಸಕ ಎಚ್.ಎಸ್.ಶಿವಶಂಕರ್, ಮಲೆಬೆನ್ನೂರಿನ ಚಿದಾನಂದಪ್ಪ, ದೂಡಾ ಮಾಜಿ ಅಧ್ಯಕ್ಷ ದೇವರಮನೆ ಶಿವಕುಮಾರ್, ದೂಡ ಮಾಜಿ ಅಧ್ಯಕ್ಷ ಯಶವಂತರಾವ್ ಜಾಧವ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಸಾಹಿತಿ ಡಾ. ವಿಜಯಲಕ್ಷ್ಮಿ ಬಾಳೆಕುಂದ್ರಿಯವರು ಉಪನ್ಯಾಸ ನೀಡಲಿದ್ದಾರೆ. ನಂತರ ಗುರುದೀಕ್ಷೆ ನಡೆಯಲಿದೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಎಂ.ಬನ್ನಯ್ಯಸ್ವಾಮಿ, ದೂಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ, ದಾಕ್ಷಾಯಣಮ್ಮ, ಗುರುರಾಜ, ಪರಮೇಶ್ವರಪ್ಪ, ಬಿ.ಎಂ.ವಾಗಿಶ್ವರಯ್ಯ ಇದ್ದರು.

## ಅನೈತಿಕ ಸಂಬಂಧಕ್ಕೆ ಗರ್ಭಿಣಿ ಸೇರಿ ಇಬ್ಬರು ಬಲಿ

**ದೆಹಲಿ, ಅ. 19:** ಅನೈತಿಕ ಸಂಬಂಧ ಯಾವತ್ತಿದ್ದರೂ ಅಪಾಯಕಾರಿ. ಈ ವಿಚಾರ ಪದೆ ಪದೇ ಸಾಬೀತಾಗುತ್ತಲೇ ಇದೆ. ತಪ್ಪು ಎಂದು ಗೊತ್ತಿದ್ದರೂ ಪರ ಪುರುಷ/ಮಹಿಳೆಯ ವ್ಯಾಮೋಹಕ್ಕೆ ಒಳಗಾಗುವವರ ಸಂಖ್ಯೆ ಕಡಿಮೆಯೇನಿಲ್ಲ ಅಂತಹದ್ದೇ ಘಟನೆಯೊಂದು ದೆಹಲಿಯಲ್ಲಿ ನಡೆದಿದ್ದು, ಗರ್ಭಿಣಿ ಸೇರಿ ಇಬ್ಬರು ಅಸುನೀಗಿದರೆ ವ್ಯಕ್ತಿಯೊಬ್ಬ ಗಂಭೀರ ಗಾಯಗೊಂಡು ಜೀವನ್ಮರಣದ ನಡುವೆ ಹೋರಾಟ ನಡೆಸುತ್ತಿದ್ದಾನೆ. ಮದುವೆಯಾಗಿ ಇಬ್ಬರು ಮಕ್ಕಳಿದ್ದರೂ ಪರಪುರುಷನ ಜತೆ ಅನೈತಿಕ ಸಂಬಂಧ ಬೆಳೆಸಿದ್ದ ಮಹಿಳೆಯಿಂದ ಇಷ್ಟೆಲ್ಲ ರಾದ್ಧಾಂತವಾಗಿದೆ.



# ರಾಶಿ ಭವಿಷ್ಯ

### ಮೇಷ ರಾಶಿ

ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಆರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ನಿಮಗೆ ಆಶ್ಚರ್ಯವಾಗುವ ಹಾಗೆ ನಿಮ್ಮ ಸಹೋದರ ನಿಮ್ಮನ್ನು ಪಾರು ಮಾಡುತ್ತಾರೆ. ನೀವು ಒಬ್ಬರೊಬ್ಬರನ್ನು ಸಂತೋಷವಾಗಿಡಲು ಒಟ್ಟೊಟ್ಟಿಗೆ ಕೆಲಸ ಮಾಡಬೇಕು.

### ವೃಷಭ ರಾಶಿ

ಇತ್ತೀಚಿಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಸಂಜೆ ಸಾಮಾಜಿಕ ಚಟುವಟಿಕೆ ನೀವು ನಿರೀಕ್ಷಿಸಿದ್ದಕ್ಕಿಂತ ಉತ್ತಮವಾಗಿರುತ್ತದೆ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ಮಿಥುನ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ಯಾರನ್ನಾದರೂ ಮರಳಿ ಎರವಲು ಕೇಳುತ್ತಿದ್ದರೆ ಮತ್ತು ಇಲ್ಲಿಯವರೆಗೆ ಅವರು ನಿಮ್ಮ ಮಾತನ್ನು ತಪ್ಪಿಸುತ್ತಿದ್ದರೆ, ಇಂದು ಅವರು ಮಾತನಾಡದೆ ಹಣವನ್ನು ನಿಮಗೆ ಹಿಂದಿರುಗಿಸಬಹುದು. ಮಕ್ಕಳು ಕ್ರೀಡೆ ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಹೆಚ್ಚು ಸಮಯ ಕಳೆಯುತ್ತಾರೆ.ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ.

### ಕರ್ಕ ರಾಶಿ

ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ಅನಿರೀಕ್ಷಿತ ಜವಾಬ್ದಾರಿಗಳು ನಿಮ್ಮ ದಿನದ ಯೋಜನೆಗಳಿಗೆ ಅಡ್ಡಿಪಡಿಸುತ್ತವೆ ನೀವು ಇತರರಿಗೆ ಹೆಚ್ಚು ಮತ್ತು ನಿಮಗಾಗಿ ಕಡಿಮೆ ಮಾಡಿಕೊಳ್ಳುತ್ತೀರಿ.

### ಸಿಂಹ ರಾಶಿ

ಸಾಧ್ಯವಾದರೆ ದೀರ್ಘ ಪ್ರಯಾಣವನ್ನು ತಪ್ಪಿಸಿ. ಏಕೆಂದರೆ ನೀವು ಪ್ರಯಾಣಿಸು ತುಂಬಾ ದುರ್ಬಲರಾಗಿದ್ದೀರಿ ಹಾಗೂ ಇದು ಮತ್ತಷ್ಟು ನಿಮ್ಮನ್ನು ದುರ್ಬಲಗೊಳಿಸುತ್ತದೆ. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ.

### ಕನ್ಯಾ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಇಂದು ಹಾಜರಾಗುವ ಸಮಾರಂಭದಲ್ಲಿ ಹೊಸ ಸ್ನೇಹ ಅಭಿವೃದ್ಧಿಯಾಗುತ್ತದೆ. ನಿಮ್ಮ ಪ್ರೀತಿ ಸಂಗಾತಿಯ ಒಂದು ಹೊಸ ಅದ್ಭುತ ಭಾಗವನ್ನು ನೀವಿಂದು ನೋಡಬಹುದು.

### ತುಲಾ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

### ವೃಶ್ಚಿಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು– ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಸಣ್ಣ ಮಕ್ಕಳು ನಿಮ್ಮನ್ನು ವ್ಯಸ್ತವಾಗಿರಿಸುತ್ತಾರೆ ಮತ್ತು ನಿಮಗೆ ಸಂತೋಷ ತರುತ್ತಾರೆ. ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ. ಈ ದಿನವು ನಿಮ್ಮ ಪ್ರೀತಿಪಾತ್ರರ ನಗುವಿನಿಂದ ಪ್ರಾರಂಭವಾಗುತ್ತದೆ, ಮತ್ತು ಪರಸ್ಪರರ ಕನಸಿನಲ್ಲಿ ಕೊನೆಗೊಳ್ಳುತ್ತಾದೆ.

### ಧನು ರಾಶಿ

ನೀವು ಇಂದು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಅಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ. ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ. ನಿಮ್ಮ ಬಿಡುವಿರದ ಕೆಲಸದಿಂದ ಸ್ವಲ್ಪ ಸಮಯ ತೆಗೆದುಕೊಳ್ಳಿ ಹಾಗೂ ನಿಮ್ಮ ಕುಟುಂಬದೊಂದಿಗೆ ಯಾವುದಾದರೂ ಪಾರ್ಟಿಗೆ ಹೋಗಿ.

### ಮಕರ ರಾಶಿ

ಒತ್ತಡ ತೊಡೆದುಹಾಕಲು ನಿಮ್ಮ ಮಕ್ಕಳ ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ ನೀವು ಮಗುವಿನ ಗುಣಪಡಿಸುವ ಶಕ್ತಿಯನ್ನು ಅನುಭವಿಸುತ್ತೀರಿ. ಅವರು ಭೂಮಿಯ ಮೇಲೆ ಅತ್ಯಂತ ಶಕ್ತಿಯುತ ಆಧ್ಯಾತ್ಮಿಕ ಮತ್ತು ಭಾವನಾತ್ಮಕ ವ್ಯಕ್ತಿತ್ವವಾಗಿರುತ್ತಾರೆ. ನೀವೇ ಮರುಚೈತನ್ಯ ಹೊಂದುತ್ತೀರಿ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು.

### ಕುಂಭ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ.

### ಮೀನ ರಾಶಿ

ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ನಿಮ್ಮ ಮಾತುಗಳ ಬಗ್ಗೆ ಎಚ್ಚರ ವಹಿಸಿ. ನಿಮ್ಮ ಕರೆಯನ್ನು ಮುಂದುವರಿಸುವ ಮೂಲಕ ನಿಮ್ಮ ಪ್ರಣಯದ ಸಂಗಾತಿಯನ್ನು ಚುಡಾಯಿಸುತ್ತೀರಿ.

# ಮಹಿಳೆಯರು ಅಧಿಕ ಆದಾಯದ ಸಣ್ಣ ಪ್ರಮಾಣದ ಚಟುವಟಿಕೆಗಳನ್ನು ಕೈಗೊಳ್ಳಬೇಕು

**ಬಳ್ಳಾರಿ:** ಮಹಿಳೆಯರು ಅಧಿಕ ಆದಾಯವನ್ನು ಗಳಿಸುವಂತಹ ಸಣ್ಣ ಪ್ರಮಾಣದ ಚಟುವಟಿಕೆಗಳನ್ನು ಮಹಿಳಾ ಸ್ವಸಹಾಯ ಸಂಘಗಳು ಕೈಗೊಳ್ಳಬೇಕು. ಕೇವಲ ಕೃಷಿ ಇಲಾಖೆ ಅಲ್ಲದೇ, ಮೀನುಗಾರಿಕೆ, ತೋಟಗಾರಿಕಾ ಇಲಾಖೆಣಟಿಜಜಜಿಟಿಜಜಂಯಲ್ಲೂ ಸಹ ಗುಂಪುಗಾರಿಕೆಗೆ ಅವಕಾಶವಿದ್ದು, ತಾವೆಲ್ಲರೂ ಸದುಪಯೋಗಪಡಿಸಿಕೊಳ್ಳಬೇಕು ಎಂದು ಉಪ ಕೃಷಿ ನಿರ್ದೇಶಕ ಎಸ್ ಎನ್ ಮಂಜುನಾಥ ಅವರು ಹೇಳಿದರು.

ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ಮಹಿಳಾ ಕಿಸಾನ್ ದಿವಸ್ ಅಂಗವಾಗಿ ಬಳ್ಳಾರಿ ಹಾಗೂ ಕುರುಗೋಡು ತಾಲ್ಲೂಕಿನ ಮಹಿಳಾ ಸ್ವಸಹಾಯ ಗುಂಪುಗಳಿಗೆ ಕೌಶಲ್ಯಾಭಿವೃದ್ಧಿ ಹಾಗೂ ಬಲವರ್ಧನೆ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಹಿಳೆಯರು ಸಣ್ಣ ಒಕ್ಕೂಟಗಳನ್ನು ಮಾಡಿಕೊಂಡು ಕೃಷಿ ಇಲಾಖೆಯಡಿ ದೊರೆಯುವ ಪಿ.ಎಮ್.ಎಫ್.




ಎಂ.ಇ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು. ಕಾರ್ಯಕ್ರಮದಲ್ಲಿ ಪ್ರಾತ್ಯಕ್ಷಿಕೆ ಮುಖಾಂತರ ತೋರಿಸಲಾಗುತ್ತಿರುವ ಜಾಮ್ ತಯಾರಿ ಹಾಗೂ ಕ್ರೋಶೆಟ್ ಚಟುವಟಿಕೆಯನ್ನು ಮುಂದಿನ ಒಂದು ವರ್ಷದೊಳಗೆ ಮಹಿಳಾ ಸ್ವಸಹಾಯ ಸಂಘಗಳು ಅಥವಾ ಕೃಷಿ ಸಖಿಯರು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮಹಿಳಾ ಸ್ವಸಹಾಯ ಸಂಘಗಳು ತಮ್ಮ ಉತ್ಪನ್ನಗಳನ್ನು ಬ್ರಾಡ್ ಂಡಿಂಗ್ ಮಾಡಿ ಮಾರಾಟ ಮಾಡಬೇಕು. ಒಳ್ಳೆಯ ಉತ್ಪನ್ನವನ್ನು ತಯಾರಿಸಿದಲ್ಲಿ, ಮಾರ್ಟ್ಗಳು ತಮ್ಮಲ್ಲಿಗೇ ಬಂದು ಖರೀದಿಸುತ್ತಾರೆ. ಇದರಿಂದ ತಮ್ಮ ಉತ್ಪನ್ನದ ಬೇಡಿಕೆ ಕೂಡ ಹೆಚ್ಚಾಗುತ್ತದೆ. ಕೃಷಿ ಸಖಿಯರು ಎಲ್ಲಾ ಇಲಾಖೆಗಳ ಸೌಲಭ್ಯಗಳನ್ನು ತಿಳಿದು ಮಹಿಳಾ ಸ್ವಸಹಾಯ ಸಂಘಗಳಿಗೆ ಹಾಗೂ ರೈತ ಶಕ್ತಿ ಗುಂಪುಗಳಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಸಹಾಯಕ ಕೃಷಿ ನಿರ್ದೇಶಕರಾದ ನದಾಫ್ ಅವರು ಮಾತನಾಡಿ, ರೈತ ಮಹಿಳೆಯರು ಕೇವಲ ಮನೆಕೆಲಸಕ್ಕಷ್ಟೇ ಸೀಮಿತವಾಗದೆ, ಮನೆಯ ಖರ್ಚನ್ನು ಭರಿಸುವ ಸಣ್ಣ ಉದ್ಯಮಗಳಾದ ಹಸಿಮೆಣಸಿನ ಪುಡಿ, ಅಗಸೆ ಪುಡಿ, ಗುಲಾಬ್ ಜಾಮೂನ್ ಪುಡಿ, ಮಿಕ್ಷಣ್ಣಿನ ಜಾಮ್ ಇನ್ನೂ ಮುಂತಾದವುಗಳನ್ನು ಒಂದು ಬ್ರಾಂಡ್ ಹೆಸರನ್ನು ನೀಡಿ ತಮ್ಮ ಹಳ್ಳಿಗಳಲ್ಲಿ ಅಥವಾ ತಾಲೂಕಿನ ಮಳಿಗೆಗಳಲ್ಲಿ ಮಾರಬಹುದು. ಇದರಿಂದ ಮಹಿಳೆಯರು ಉಳಿತಾಯದ ಮನೋಭಾವವನ್ನು ಬೆಳೆಸಿಕೊಂಡು ಅಧಿಕ ಲಾಭವನ್ನು ಗಳಿಸಿ ಆರ್ಥಿಕವಾಗಿ ಸಶಕ್ತರಾಗಬೇಕೆಂದು ಮಹಿಳೆಯರಿಗೆ ಹುಮ್ಮಸ್ಸು ನೀಡಿದರು.

ಬಳಿಕ ಮಹೇಶ್ವರಿ ಅವರು ಕಾರ್ಯಕ್ರಮದಲ್ಲಿ ಸುಮಾರು ಎರಡು ಗಂಟೆಗಳ ಕಾಲ ಮಹಿಳಾ ಸ್ವಸಹಾಯ ಗುಂಪುಗಳಿಗೆ ಹಾಗೂ ಕೃಷಿ ಸಖಿಯರಿಗೆ ಸೀರೆಗಳಿಗೆ ಕ್ರೋಶೆಟ್ ಕೆಲಸ (ಕೊಂಬೆ ಹೆಣಿಗೆ) ಹಾಗೂ ವೇಸ್ಟ್ ಬಟ್ಟೆಗಳಿಂದ ಮ್ಯಾಟ್ ತಯಾರಿಸುವುದರ ಬಗ್ಗೆ ಪ್ರಾತ್ಯಕ್ಷಿಕೆಯ ಮುಖಾಂತರ ತರಬೇತಿಯನ್ನು ನೀಡಿದರು. ಸುಮಂಗಲ ಅವರು ವಿವಿಧ ಬಗೆಯ ಹಣ್ಣುಗಳಿಂದ ಸೇಬು, ಬಾಳೆಹಣ್ಣು, ಕಿತ್ತಳೆ, ಕರಿದ್ರಾಕ್ಷಿ, ಸಪೋಟ ಮಿಕ್ಷಣ್ಣಿನ ಜಾಮ್ ತಯಾರಿಸುವುದನ್ನು ತಿಳಿಸಿ ಎಲ್ಲರಿಗೂ ಸವಿಯಲು ನೀಡಿದರು.

ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಕವಿತಾ, ಕೃಷಿ ಅಧಿಕಾರಿಗಳಾದ ಸೌಮ್ಯ, ರೇಖಾ,

ಜ್ಯೋತಿ, ಗಾಯಿತ್ರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಅರುಣಾ, ಸುಷ್ಮ, ಆತ್ಮ ಯೋಜನೆಯ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರಾದ ವಾಣಿ ಕೋರಪ್ಪಳ, ಸಹಾಯಕ ತಾಂತ್ರಿಕ ವ್ಯವಸ್ಥಾಪಕರಾದ ಶಿಲ್ಪಾ ಸೇರಿದಂತೆ ಸ್ವ–ಸಹಾಯ ಗುಂಪಿನ ಸದಸ್ಯರು ಹಾಗೂ ಸಿಬ್ಬಂದಿಗಳು ಇತರರು ಉಪಸ್ಥಿತರಿದ್ದರು.

# ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಆತ್ಮಸ್ಥೈರ್ಯ ಹೆಚ್ಚುತ್ತದೆ

**ದಾವಣಗೆರೆ :** ಇಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ದಾವಣಗೆರೆ ಅಥ್ಲೆಟಿಕ್ ಅಕಾಡೆಮಿ ವತಿಯಿಂದ ಏರ್ಪಡಿಸಲಾಗಿದ್ದ ಕಿಡ್ಸ್ ಅಥ್ಲೆಟಿಕ್ – 2025 ಮಕ್ಕಳ ಪಂದ್ಯಾವಳಿಯನ್ನು ಏರ್ಪಡಿಸಲಾಗಿತ್ತು ಈ ಪಂದ್ಯಾವಳಿಯಲ್ಲಿ ಗ–8,10,12,14, ವರ್ಷದ ಒಳಗಿನ 500ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸಿದ್ದರು.

ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿಯವರು ಜಾವಲಿನ್ ಎಸೆಯುವುದರ ಮುಖಾಂತರ ಉದ್ಘಾಟಿಸಿ ಮಕ್ಕಳು ಕ್ರೀಡೆಯಲ್ಲಿ ಭಾಗವಹಿಸುವುದರಿಂದ ತಮ್ಮ ಬುದ್ಧಿಶಕ್ತಿ ಆತ್ಮಸ್ಥೈರ್ಯ ಬೆಳವಣಿಗೆಯಾಗುತ್ತದೆ ಜೀವನದಲ್ಲಿ ಸದೃಢ ಉತ್ತಮ ಪ್ರಜೆಗಳಾಗುತ್ತೀರಾ ಎಂದು ಮಕ್ಕಳಿಗೆ ಹೇಳಿದರು.




ಈ ಸಮಾರಂಭದಲ್ಲಿ ಆಯೋಜಕರಾದ ಧನಂಜಯ್ ಮುಖ್ಯ ಅತಿಥಿಗಳಾದ ರಾಜಕುಮಾರ್, ಜೆ ಎಸ್ ಪಟೇಲ್ ಕಾಲೇಜಿನ ಪ್ರಿನ್ಸಿಪಾಲ್ ಆದ ಮುಸ್ತಫ, ಮಲ್ಲಿಕಾರ್ಜುನ್ ಗಣೇಶ್ ಹಾಲೇಶ್ ಕೀರ್ತಿ, ಇನ್ನು ಮುಂತಾದವರು ಇದ್ದರು

# ದೇಹದಾನ– ಅಂಗಾಂಗ ದಾನದಲ್ಲಿ ರಾಜ್ಯಕ್ಕೆ 2 ನೇ ಸ್ಥಾನ: ಕೇಂದ್ರ ಆರೋಗ್ಯ ಸಮಿತಿ ಸಭೆ ಪ್ರಶಂಸೆ: ಸಂಸದೆ ಡಾ.ಪ್ರಭಾ

**ದಾವಣಗೆರೆ:** ದೇಹದಾನ ಮತ್ತು ಅಂಗಾಂಗ ದಾನದಲ್ಲಿ ಕರ್ನಾಟಕ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದ್ದು, ಈ ಬಗ್ಗೆ ಕೇಂದ್ರ ಸರ್ಕಾರದ ಆರೋಗ್ಯ ಸಮಿತಿ ಸಭೆ ಪ್ರಶಂಸೆ ವ್ಯಕ್ತಪಡಿಸಿದೆ ಎಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದ್ದಾರೆ.

ಆರ್‌ಬಿಐನ ಅಂಗಸಂಸ್ಥೆಯಾದ ಮೈಸೂರಿನ ಬ್ಯಾಂಕ್ ನೋಟ್ ಪೇಪರ್ ಮಿಲ್ ಬಿಎನ್‌ಪಿಎಂಐನ ಸಿಎಸ್‌ಆರ್ ನಿಧಿಯಡಿ ದಾವಣಗೆರೆಯ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ 2 ಕೋಟಿ 50 ಲಕ್ಷ ರೂಪಾಯಿ ಮೌಲ್ಯದ ವೈದ್ಯಕೀಯ ಉಪಕರಣಗಳ ಹಸ್ತಾಂತರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಡೀ ದೇಶದಲ್ಲಿಯೇ ಅಂಗಾಂಗ ಮತ್ತು ದೇಹ ದಾನದಲ್ಲಿ ಕರ್ನಾಟಕ 2 ನೇ ಸ್ಥಾನದಲ್ಲಿದ್ದು, ಈ ಬಗ್ಗೆ ಬುಧವಾರ ನಡೆದ ಕೇಂದ್ರ ಸರ್ಕಾರದ ಆರೋಗ್ಯ ಸಮಿತಿ ಸಭೆಯಲ್ಲಿ ಪ್ರಶಂಸನೀಯ ಮಾತುಗಳು ಕೇಳಿಬಂದವು. ಅಂಥಹ ಒಳ್ಳೆಯ ಸೇವೆ ಹಾಗೂ ಮಾನವೀಯ ಮೌಲ್ಯಗಳು ಇರುವ ಕಾರ್ಯ ಕರ್ನಾಟಕದಿಂದ ನಡೆಯತ್ತಿದೆ. ಅಂಗಾಂಗ ದಾನದ ಬಗ್ಗೆ ಸಾಕಷ್ಟು ಜನರಿಗೆ ಜ್ಞಾನದ ಕೊರತೆ ಇದೆ. ಆದ್ದರಿಂದ ಈ ಬಗ್ಗೆ ಅಭಿಯಾನ ಆರಂಭಿಸಬೇಕಿದೆ ಎಂದು ಹೇಳಿದರು.ದಾವಣಗೆರೆ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲೂ ಅಂಗಾಂಗ ದಾನ ಮತ್ತು ಅಂಗಾಂಗ ಕಸಿ ಘಟಕ ಆರಂಭಿಸಲು ಎಲ್ಲರೂ ಸೇರಿ ಪ್ರಯತ್ನಿಸೋಣ ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

# ಪರಿಸರದ ಮಾಲಿನ್ಯ ಉಂಟು ಮಾಡುವಂತಹ ಹಬ್ಬಗಳನ್ನ ಸ್ವಯಂ ನಿಯಂತ್ರಿಸಿಕೊಳ್ಳಬೇಕು

**ಚಿತ್ರದುರ್ಗ:** ಬರುವ ದೀಪಾವಳಿ ಹಬ್ಬದ ಸಮಯದಲ್ಲಿ ಸಾರ್ವಜನಿಕರು ಹಸಿರು ಪಟಾಕಿಗಳನ್ನೇ ಸಿಡಿಸಿ, ಮಾಲಿನ್ಯವನ್ನು ತಡೆದು ಪರಿಸರದ ಬಗ್ಗೆ ಕಾಳಜಿ ವಹಿಸಬೇಕು ಪ್ರತಿಯೊಬ್ಬರಲ್ಲೂ ಸಹ ಪರಿಸರ ಸ್ನೇಹಿ ಚಿಂತನೆಗಳನ್ನು ಅಳವಡಿಸಿಕೊಂಡು, ಮುಂದಿನ ಜನಾಂಗಕ್ಕೆ ಉತ್ತಮ ವಾತಾವರಣವನ್ನು ಬಿಟ್ಟು ಹೋಗಬೇಕಾಗಿದ್ದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಉಪ ಪರಿಸರ ಅಧಿಕಾರಿಗಳಾದ ರಾಜೇಶ್ ರವರು ಮಾತನಾಡಿದರು.

ಅವರು ಚಿತ್ರದುರ್ಗ ನಗರದ ಐಯುಡಿಪಿ ಲೇಔಟ್ ನಲ್ಲಿರುವ ಪ್ರಶಾಂತಿ ವಿದ್ಯಾಲಯದಲ್ಲಿ ಆರ್ ಪ್ರವೀಣ್ ಚಂದ್ರ ರವರ ಜಾನ್ ಮೈನ್ಸ್ ಆಯೋಜಿಸಿದ್ದ ಸ್ವಚ್ಛತಾ ಪಕ್ವಾಡ ಯೋಜನೆಯಲ್ಲಿ, ಕಾರ್ಯಕ್ರಮದಲ್ಲಿ ಉದ್ಘಾಟಿಸುತ್ತಾ ಮಾತನಾಡುತ್ತಿದ್ದರು.

ಮಾಲಿನ್ಯ ಉಂಟು ಮಾಡುವಂತಹ ಹಬ್ಬಗಳ ಬಗ್ಗೆ ನಾವು ಗಮನ ಹರಿಸಬೇಕು, ಬರುವ ದೀಪಾವಳಿಯಂದು ಹೆಚ್ಚು ಪಟಾಕಿ ಸಿಡಿಸದೆ ಶಬ್ದ ಮಾಲಿನ್ಯ, ವಾಯು ಮಾಲಿನ್ಯ, ಜಲ ಮಾಲಿನ್ಯವನ್ನು ನಿಯಂತ್ರಿಸಲು, ಸ್ವಲ್ಪ ಮಟ್ಟಿಗೆ ಹಸಿರು ಪಟಾಕಿಗಳನ್ನೇ ಸಿಡಿಸಿ, ಸ್ವಯಂ ನಿಯಂತ್ರಣ ಸಾಧಿಸಿ ಕೊಳ್ಳಬೇಕೆಂದು ವಿನಂತಿಸಿಕೊಂಡರು.

ಜಾನ್ ಮೈನ್ಸ್‌ನ ಜಿಯಾಲಜಿ ಮ್ಯಾನೇಜರ್ ಶರತ್ ಕುಮಾರ್ ಅವರು ಮಾತನಾಡಿ ಮಕ್ಕಳು ಸಿಹಿ ತಿಂಡಿಗಳನ್ನು ತಿಂದಾಗ, ಅವುಗಳ ಕವರ್ ಗಳನ್ನು ಜೋಬಿನಲ್ಲಿಟ್ಟುಕೊಂಡು, ನಂತರ ಕಸದ ಬುಟ್ಟಿಗೆ ಹಾಕುವಂತಹ ಅಭ್ಯಾಸವನ್ನು ರೂಡಿಸಿಕೊಳ್ಳಬೇಕು, ಎಲ್ಲೆಂದರಲ್ಲಿ ಕಸ ಚೆಲ್ಲುವ




ಹವ್ಯಾಸವನ್ನು ತೊರೆಯಬೇಕು ಎಂದರು.

ಜಾನ್ ಮೈನ್ಸ್ ನ ಮ್ಯಾನೇಜರ್ ಆದ ಗುರುರಾಜ್ ಹಿರೇಮಠ್ ರವರು ಮಾತನಾಡಿ ಸ್ವಚ್ಛತೆ ಬಗ್ಗೆ ಹೆಚ್ಚು ಆದ್ಯತೆ ನೀಡುವಂತಹ ವಿಚಾರಗಳನ್ನು, ಸಣ್ಣವಯಸ್ಸಿನಲ್ಲಿ ಮಕ್ಕಳಿಗೆ ಬೋಧಿಸಬೇಕು, ಪ್ಲಾಸ್ಟಿಕ್ ಅನ್ನು ಮರುಬಳಕೆ ಮಾಡಿ ಪರಿಸರವನ್ನ ಉಳಿಸಿಕೊಳ್ಳಬೇಕು ಎಂದರು.


ಕಾರ್ಯಕ್ರಮದಲ್ಲಿ ಅಧ್ಯಕ್ಷ ವಹಿಸಿದ್ದ ಪ್ರಶಾಂತಿ ವಿದ್ಯಾಲಯದ ಅಧ್ಯಕ್ಷರಾದ ಶ್ರೀ ರಮೇಶ್ ಇಟಗಿ ಅವರು ಮಾತನಾಡಿ ಮಕ್ಕಳಲ್ಲಿರುವ ಮುಗ್ಧತೆಯನ್ನು ಪರಿಸರ ರಕ್ಷಣೆ ಗೋಸ್ಕರ ಜಾಗೃತಿಗೊಳಿಸಬೇಕು, ದೊಡ್ಡವರು ಪರಿಸರದ ಚಿಂತನೆ ಅಳವಡಿಸಿಕೊಂಡಷ್ಟು ಮಕ್ಕಳು ಸಹ ಅವುಗಳನ್ನು ಅಳವಡಿಸಿಕೊಳ್ಳಲು ಅನುಕೂಲಕರವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಶಾಂತಿ ವಿದ್ಯಾಲಯದ ಮುಖ್ಯೋಪಾಧ್ಯಾಯರಾದ ಶ್ರೀಮತಿ ಮೌನ, ಶಿಕ್ಷಕರಾದ ಅಶ್ವಿನಿ, ಪವಿತ್ರ, ನಿವೇದಿತ, ಜ್ಯೋತಿ, ಲತಾ, ಜಾನ್ ಮೈನ್ಸ್ ನಾ ಮಹೇಶ್, ಪರಿಸರ ಅಧಿಕಾರಿಗಳಾದ ಅಜಿತ್ ಕುಮಾರ್, ಸರ್ವೆಯರ್ ಮ್ಯಾನೇಜರ್ ಆದ ಉಲ್ಲಾಸ್ ಕುಮಾರ್, ಜೆ ಟಿ ಎಂಜಿನಿಯರಾದ ಅಮರೇಶ್ ಜಿ, ಪರಿಸರ ಅಧಿಕಾರಿಗಳಾದ ಆಸಿಫ್ ಖಾನ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಚಿತ್ರ ಬರೆದಂತಹ ಯಶಸ್, ರಾಘವೇಂದ್ರ, ಶ್ರೇಯಸ್, ಚಂದು, ವಿಶ್ವಾಸ ರವರಿಗೆ ಬಹುಮಾನ ವಿತರಿಸಲಾಯಿತು.

ಶಾಲೆಗೆ ಸ್ವಚ್ಛತೆಗೆ ಅನುಕೂಲಕರವಾಗುವಂತಹ ಕಸದ ಬುಟ್ಟಿ, ಪೊರಕೆ, ಶೌಚಾಲಯ ಸ್ವಚ್ಛಗೊಳಿಸುವ ದ್ರಾವಣಗಳು, ಕೈಗವಚಗಳು, ಮಕ್ಕಳಿಗೆ ಸೋಪು, ಪೇಸ್ಟು, ಉಗುರು ಕತ್ತರಿಸುವ ಸಾಧನ ಮುಂತಾದವುಗಳನ್ನು ವಿತರಿಸಿ, ಸ್ವಚ್ಛತಾ ಪಕ್ವಾಡದ ಬಗ್ಗೆ ಜಾಗೃತಿ ಮೂಡಿಸಲಾಯಿತು.

# ಭಾರತ–ಪಾಕ್ ಯುದ್ಧ ನಿಲ್ಲಿಸಿದ್ದು ನಾನೇ ; ಮುಂದುವರೆದ ಟ್ರಂಪ್ ಕನವರಿಕೆ



**ವಾಷಿಂಗ್ಟನ್:** ಭಾರತ ಮತ್ತು ಪಾಕಿಸ್ತಾನ ನಡುವಿನ ಯುದ್ಧವನ್ನು ಪರಿಹರಿಸಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ಹೇಳಿಕೊಂಡಿದ್ದಾರೆ, ಎರಡೂ ದೇಶಗಳ ನಡುವಿನ ಗುಂಡಿನ ದಾಳಿಯಲ್ಲಿ ಏಳು ವಿಮಾನಗಳು ಯಾವ ರಾಷ್ಟ್ರಕ್ಕೆ ಸೇರಿದವು ಎಂಬುದನ್ನು ನಿರ್ದಿಷ್ಟಪಡಿಸದೆ ಹೊಡೆದುರುಳಿಸಲಾಗಿದೆ ಎಂದು ಹೇಳಿದ್ದಾರೆ. ಫಾಕ್ಸ್ ನ್ಯೂಸ್ ಪ್ರಸಾರಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಟ್ರಂಪ್, ಸುಂಕಗಳ ಬೆದರಿಕೆ ಭಾರತ ಮತ್ತು ಪಾಕಿಸ್ತಾನವನ್ನು ಯುದ್ಧವನ್ನು ನಿಲ್ಲಿಸುವಂತೆ ಒತ್ತಾಯಿಸಿತು ಎಂದು ಹೇಳಿದ್ದಾರೆ.

ಉದಾಹರಣೆಗೆ, ಸುಂಕಗಳ ಬೆದರಿಕೆ, ಎರಡು ಪರಮಾಣು ರಾಷ್ಟ್ರಗಳಾದ ಭಾರತ ಮತ್ತು ಪಾಕಿಸ್ತಾನವನ್ನು ಅದರತ್ತ ಸಾಗದಂತೆ ತಡೆಯಿತು. ಅವರು ಅದರತ್ತ ಸಾಗುತ್ತಿದ್ದರು. ಏಳು ವಿಮಾನಗಳನ್ನು ಹೊಡೆದುರುಳಿಸಲಾಯಿತು; ಅದು ಬಹಳಷ್ಟು. ಮತ್ತು ಅವರು ಅದರತ್ತ ಸಾಗುತ್ತಿದ್ದರು. ಮತ್ತು ಅದು ಪರಮಾಣು ಯುದ್ಧವಾಗಿರಬಹುದು ಎಂದು ಅಮೆರಿಕ ಅಧ್ಯಕ್ಷರು ಹೇಳಿದರು.

ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಲಕ್ಷಾಂತರ ಜೀವಗಳನ್ನು ಉಳಿಸಿದ್ದಕ್ಕಾಗಿ ಅವರನ್ನು ಹೊಗಳಿದ್ದಾರೆ ಎಂದು ಟ್ರಂಪ್ ಹೇಳಿದರು.ಭಾರತ ಮತ್ತು ಪಾಕಿಸ್ತಾನದ ಮೇಲೆ ಶೇ. 200 ರಷ್ಟು ಸುಂಕಗಳನ್ನು ವಿಧಿಸುವುದಾಗಿ ಬೆದರಿಕೆ ಹಾಕಿರುವುದಾಗಿ ಅಮೆರಿಕ ಅಧ್ಯಕ್ಷರು ಹೇಳಿದರು,

ಇದು ಯುದ್ಧವನ್ನು ನಿಲ್ಲಿಸುವಂತೆ ಒತ್ತಾಯಿಸಿತು.ನಾವು 200 ಸುಂಕಗಳನ್ನು ವಿಧಿಸಲಿದ್ದೇವೆ, ಅದು ನಿಮಗೆ ವ್ಯವಹರಿಸಲು ಅಸಾಧ್ಯವಾಗುತ್ತದೆ ಮತ್ತು ನಾವು ನಿಮ್ಮೊಂದಿಗೆ ವ್ಯವಹಾರ ಮಾಡುವುದಿಲ್ಲ ಎಂದು ಟ್ರಂಪ್ ಎರಡೂ ದೇಶಗಳಿಗೆ ಹೇಳಿದ್ದಾರೆ ಎಂದು ಹೇಳಿದರು.

# ವಿವಿಧ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದ ಕ್ರೀಡಾ ಇಲಾಖೆಯು ಕ್ರೀಡಾ ಸಾಧನೆಗೆ ಸಂಬಂಧಪಟ್ಟಂತೆ ವಿವಿಧ ಕ್ರೀಡಾ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ಸಾಧಕರಿಗೆ ವಿವಿಧ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜುನ ಪ್ರಶಸ್ತಿ, ರಾಷ್ಟ್ರೀಯ ಕ್ರೀಡಾ ಪೋಷಕ ಪ್ರಶಸ್ತಿ, ದ್ರೋಣಚಾರ್ಯ ಪ್ರಶಸ್ತಿ, ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿಗೆ ಆನ್ ಲೈನ್ ಮೂಲಕ ಅಕ್ಟೋಬರ್ 28 ರೊಳಗಾಗಿ ಸಲ್ಲಿಸಬೇಕು. ಅರ್ಜಿದಾರರು ವೆಬ್ ಸೈಟ್ ತಿತಿತಿ.ಜಟಿಣಥಿಚಿ.ಠಿಂಡಿಣಚಿ.ರಿಂತ ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 011–23387432, 1800–202–5155, 1800–258–5155 ಸಂಪರ್ಕಿಸಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಹರ್ಷ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ದಾವಣಗೆರೆ :** ಖೇಲೋ ಇಂಡಿಯಾ ಯೋಜನೆಯಡಿ ರಾಜ್ಯ ಉತ್ಕೃಷ್ಟತಾ ಕೇಂದ್ರಕ್ಕೆ ಗೌರವಧನದ ಮೇಲೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ನಿಗಧಿತ ನಮೂನೆಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ದಾವಣಗೆರೆ ಇಲ್ಲಿ ಪಡೆದು ನಿಗದಿತ ವಿವರಗಳನ್ನು ಭರ್ತಿಮಾಡಿ ಸಂಬಂಧಿಸಿದ ದಾಖಲೆಗಳನ್ನು ರೋಟರಿ ಮಾಡಿಸಿ ನವಂಬರ್ 10 ರೊಳಗಾಗಿ ಕಚೇರಿಗೆ ಸಲ್ಲಿಸಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಹರ್ಷ ತಿಳಿಸಿದ್ದಾರೆ.

# ಬಿಎಸ್‌ಎನ್‌ಎಲ್ ದೀಪಾವಳಿ ಬೊನಾನ್ಜಾವನ್ನು ಪ್ರಾರಂಭಿಸಿದೆ

**ದಾವಣಗೆರೆ :** ಭಾರತದ ವಿಶ್ವಾಸಾರ್ಹ ಸರ್ಕಾರಿ ಸ್ವಾಮ್ಯದ ಟೆಲಿಕಾಂ ದೈತ್ಯ ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ ದೀಪಾವಳಿ ಆಫರ್ ದೀಪಾವಳಿ ಬೊನಾನ್ಜಾವನ್ನು ಪ್ರಾರಂಭಿಸಿದೆ.

ಇದು ಸೀಮಿತ ಅವಧಿಯ ರೂ. 1 ಕೊಡುಗೆಯಾಗಿದ್ದು, ಇದು ಬಳಕೆದಾರರಿಗೆ ಬಿಎಸ್ ಎನ್ ಎಲ್ ನ 4ಜಿ ಮೊಬೈಲ್ ಸೇವೆಗಳನ್ನು ಒಂದು ಪೂರ್ಣ ತಿಂಗಳು ಪರೀಕ್ಷಿಸಲು ಮತ್ತು ಅನುಭವಿಸಲು ಅವಕಾಶ ಮಾಡಿಕೊಟ್ಟಿದೆ.

ಅನಿಯಮಿತ ಧ್ವನಿ ಕರೆಗಳು (ಸ್ಥಳೀಯ, ಎಟಿಡಿ), ದಿನಕ್ಕೆ 2 ಜಿಬಿ ಹೈ–ಸ್ಪೀಡ್ ಡೇಟಾ, ದಿನಕ್ಕೆ 100 ಎಎಂಎಸ್, ಮತ್ತು ಬಿಎಸ್ ಎನ್ ಎಲ್ ನ ಸಿಮ್ ಸಂಪೂರ್ಣವಾಗಿ ಉಚಿತ, ಮಾನ್ಯತೆ –30 ದಿನಗಳು. ನವಂಬರ್ 15 ರವರೆಗೆ ಜಾರಿಯಾರುತ್ತದೆ.

ಗ್ರಾಹಕರು ಹತ್ತಿರದ ಬಿಎಸ್ ಎನ್ ಎಲ್ ಗ್ರಾಹಕ ಸೇವಾ ಕೇಂದ್ರ ಮತ್ತು ಚಿಲ್ಲರೆ ವ್ಯಾಪಾರಿಗಳಿಗೆ ಭೇಟಿ ನೀಡುವ ಮೂಲಕ ಬಿಎಸ್ ಎನ್ ಎಲ್ ದೀಪಾವಳಿ ಬೊನಾನ್ಜಾ ಯೋಜನೆಯನ್ನು ಪಡೆಯಬಹುದು ಎಂದು ಡಿಜಿಎಂ ತಿಳಿಸಿದ್ದಾರೆ.

# ಗ್ರಾಮ ಸಹಾಯಕ ಹುದ್ದೆಗೆ ಅರ್ಜಿ ಆಹ್ವಾನ

**ದಾವಣಗೆರೆ :** ದಾವಣಗೆರೆ ತಾಲ್ಲೂಕು ಕಸಬಾ ಹೋಬಳಿ ಉತ್ತರ ವೃತ್ತದ ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳವರು ಅಗತ್ಯ ದಾಖಲಾತಿಗಳ ವಿವರಗಳನ್ನು ಅಕ್ಟೋಬರ್ 29 ರೊಳಗೆ ದಾವಣಗೆರೆ ತಾಲ್ಲೂಕು ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ತಾಲ್ಲೂಕು ಕಚೇರಿಯನ್ನು ಸಂಪರ್ಕಿಸಬೇಕೆಂದು ತಹಶೀಲ್ದಾರ್ ಅಶ್ವಥ್ ತಿಳಿಸಿದ್ದಾರೆ.

# ಶ್ರೀಬೀರಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ವ್ಯಾಪಾರಕ್ಕೆ ಅವಕಾಶ

**ದಾವಣಗೆರೆ :** ಅ.19 ರಿಂದ 22 ರವರೆಗೆ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ಬಾಳೆಕಂಬ, ಹೂ, ಹಣ್ಣು ಮಾವಿನ ತೋರಣ, ಬೂದೂ ಗುಂಬಳ ಕಾಯಿ, ಕಾಂಚಿಕಡ್ಡಿ ಹಾಗೂ ಸಗಣಿ ಗುರ್ಜಿಗಳ ವ್ಯಾಪಾರಕ್ಕೆ ಅವಕಾಶ ಕಲ್ಪಿಸಲಾಗಿದೆ.

ನಗರದ ಪಿ.ಬಿ. ರಸ್ತೆಯ ಅರಸು ಕ್ರಾಸ್ ಮತ್ತು ಐಬಿ ರಸ್ತೆ ಹಾಗೂ ಇತರೆ ಯಾವುದೇ ಭಾಗಗಳಲ್ಲಿ ರಸ್ತೆ ಸಂಚಾರಕ್ಕೆ ಅಡ್ಡಿಯಾಗುವಂತೆ ಬಾಳೆಕಂಬ, ಹೂ, ಹಣ್ಣು ಮಾವಿನ ತೋರಣ, ಬೂದು ಗುಂಬಳ ಕಾಯಿ, ಕಾಚಿಕಡ್ಡಿ ಹಾಗೂ ಸಗಣಿ ಗುರ್ಜಿಗಳ ವ್ಯಾಪಾರ ಮಾಡದೇ ಶ್ರೀ ಬೀರಲಿಂಗೇಶ್ವರ ದೇವಸ್ತಾನದ ಮೈದಾನದಲ್ಲಿ ಈ ಸಾಮಗ್ರಿಗಳನ್ನು ಮಾರಾಟ ಮಾಡುವಂತೆ ಹಾಗೂ ಉಳಿದ ಸಾಮಗ್ರಿಗಳನ್ನು ಅಲ್ಲಿಯೇ ಬಿಡದೇ ಹಿಂದಿರುಗಿ ಸಾಗಿಸುವಂತೆ ಸೂಚಿಸಿದೆ. ತಪ್ಪಿದಲ್ಲಿ ಪ್ರತಿ ಮಾರಾಟಗಾರರಿಂದ ತ್ಯಾಜ್ಯ ಸಂಗ್ರಹಣಾ ಶುಲ್ಕವನ್ನು ವಸೂಲಿ ಮಾಡಲಾಗುವುದೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

# ಕಟ್ಟಕಡೆಯ ಭೋವಿ ವ್ಯಕ್ತಿಯನ್ನು ಗುರುತಿಸಿ ಅಭಿವೃದ್ಧಿಯ ಕಡೆ ಕರೆದುಕೊಂಡು ಬರುವ ಪ್ರಾಮಾಣಿಕ ಪ್ರಯತ್ನ

**ಚಿತ್ರದುರ್ಗ** :ಕಟ್ಟಕಡೆಯ ಭೋವಿ ವ್ಯಕ್ತಿಯನ್ನು ಗುರುತಿಸಿ ಅಭಿವೃದ್ಧಿಯ ಕಡೆ ಕರೆದುಕೊಂಡು ಬರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಕರ್ನಾಟಕ ಸರ್ಕಾರದ ಭೋವಿ ಅಭಿವೃದ್ಧಿ ನಿಗಮಕ್ಕೆ ನೂತನ ಅಧ್ಯಕ್ಷರಾದ ಎಂ.ರಾಮಪ್ಪ ತಿಳಿಸಿದರು.

ಕರ್ನಾಟಕ ಸರ್ಕಾರದ ಭೋವಿ ಅಭಿವೃದ್ಧಿ ನಿಗಮಕ್ಕೆ ನೂತನ ಅಧ್ಯಕ್ಷರಾಗಿ ಪ್ರಥಮ ಭಾರಿಗೆ ಚಿತ್ರದುರ್ಗಕ್ಕೆ ಆಗಮಿಸಿದ ಅವರು ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಪಕ್ಷದ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ನಾನು ಬಡತನದ ಹಿನ್ನೆಲೆಯಿಂದ ಬಂದಿದ್ದೇನೆ. ಬಡವರ ಕಷ್ಟಕಾರ್ಪಣ್ಯಗಳು ಹತ್ತಿರದಿಂದ ಅನುಭವಿಸಿದ್ದೇನೆ. ಕಟ್ಟಕಡೆಯ ಭೋವಿ ವ್ಯಕ್ತಿಯನ್ನು ಗುರುತಿಸಿ ಅಭಿವೃದ್ಧಿಯ ಕಡೆ ಕರೆದುಕೊಂಡು ಬರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ರಾಜ್ಯ ಪ್ರವಾಸ ಮಾಡಿ ಸಮಾಜದ ಸ್ಥಿತಿಗಳನ್ನು ಸ್ವತಃ ಅರ್ಥೈಸಿಕೊಂಡು ಸ್ಪಂದಿಸುತ್ತೇನೆ. ಬಡವರು ಮುಗ್ದ ಜನರು ಯಾರ ಶಿಫಾರಸ್ಸು ಪಡೆಯದೆ ದಲ್ಲಾಳಿಗಳನ್ನು ಸಂಪರ್ಕಿಸದೆ ನೇರವಾಗಿ ನಿಗಮಕ್ಕೆ ಭೇಟಿ ನೀಡಿ, ಸಂವಿಧಾನದ ಅಡಿಯಲ್ಲಿ ಶಾಸಕರ ಸಚಿವರು ಗುರುತಿಸುವ ಅರ್ಹ ವ್ಯಕ್ತಿಗಳಿಗೂ ಹಾಗೂ ನಿರ್ಲಕ್ಷ್ಯಕ್ಕೆ ಒಳಪಟ್ಟ ಉತ್ಸಾಹಿ ಯುವಕರಿಗೆ ಸ್ಪಂದಿಸುವ ಕಾರ್ಯಕ್ಕೆ ಮೊದಲನೇ ಆದ್ಯತೆ ನೀಡುತ್ತೇನೆ ನಿಗಮಕ್ಕೆ




ನೇಮಕಗೊಳ್ಳಲು ಕಾರಣೀಭೂತರಾದ ಮುಖ್ಯಮಂತ್ರಿ ಸಿದ್ಧರಾಮಯ್ಯ, ಪಕ್ಷದ ಅಧ್ಯಕ್ಷರು ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಸಚಿವ ಶಿವರಾಜ ತಂಗಡಗಿಯವರಿಗೆ ಗೌರವ ತರುವಂತೆ ಘನವ್ಯಕ್ತಿತ್ವದಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತೇನೆ ಎಂದು ಹೇಳಿದರು.

ಕಛೇರಿ ಕೆಲಸದ ಜೊತೆ ಜೊತೆಯಲ್ಲಿ ರಾಜ್ಯಾಪ್ರವಾಸ ಮಾಡಿ ಜನರ ಜೀವನ ಸ್ಥಿತಿಗತಿಯನ್ನು ಖುದ್ದಾಗಿ ಅರ್ಥೈಸಿಕೊಂಡು ಜನರಿಗೆ ಸಹಾಯ ಸ್ಪಂದನೆ ಸಹಕಾರ ಮಾಡಲಾಗುವುದು. ಜನರಿಗೆ ಸ್ಪಂದಿಸುವ ಮನೋಭಾವದೊಂದಿಗೆ ಪಕ್ಷಕ್ಕೆ ಶಕ್ತಿ ತುಂಬುವ ಕಾರ್ಯನ್ಮೂಖಿಗೊಳ್ಳುವೆ. ಸರ್ಕಾರ ನೀಡುವ ಯೋಜನೆಗಳನ್ನು ಸಮುದಾಯದ ಕಟ್ಟಕಡೆಯ ವ್ಯಕ್ತಿಗಳಿಗೆ ಮುಟ್ಟಿಸುವ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಿಸಿಸಿ ಅಧ್ಯಕ್ಷರಾದ ತಾಜ್ ಪೀರ್, ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಆರ್.ಕೆ.ಸರ್ದಾರ್, ಓಬಿಸಿ ಅಧ್ಯಕ್ಷರಾದ ಎನ್.ಡಿ.ಕುಮಾರ್, ಲಕ್ಷ್ಮೀಕಾಂತ್, ಅಂಜನಪ್ಪ, ಮುದಾಸಿರ್ ನವಾಜ್, ಕನಕದಾಸ್, ಮಹಡಿ ಶಿವಮೂರ್ತಿ, ಗೀತಾ ನಂದಿನಿಗೌಡ, ಖುದ್ದುಸ್ ಆಲ್ಲಾಭಕ್ಷಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಗರದ ಪಾರ್ಶ್ವನಾಥ ವಿದ್ಯಾಸಂಸ್ಥೆ ವತಿಯಿಂದ ದೀಪಾವಳಿ ಆಚರಣೆ




**ಚಿತ್ರದುರ್ಗ:** ಚಿತ್ರದುರ್ಗ ನಗರದ ಪಾರ್ಶ್ವನಾಥ ವಿದ್ಯಾಸಂಸ್ಥೆವತಿಯಿಂದ ಶನಿವಾರ ಶಾಲಾ ಆವರಣದಲ್ಲಿ ದೀಪಾವಳಿ ಹಬ್ಬವನ್ನು ಮಕ್ಕಳ ಸಮ್ಮುಖದಲ್ಲಿ ಆಚರಣೆಯನ್ನು ಮಾಡಲಾಯಿತು.

ಈ ಸಮಯದಲ್ಲಿ ಸುಮಾರು 1500 ದೀಪಗಳನ್ನು ಹಚ್ಚುವುದರ ಮೂಲಕ ದೀಪಾವಳಿಯನ್ನು ಆಚರಣೆ ಮಾಡಲಾಯಿತು.

ಶ್ರೀ ಪಾರ್ಶ್ವನಾಥ ವಿದ್ಯಾ ಸಂಸ್ಥೆಯ ಶಾಲಾ ಆಧ್ಯಕ್ಷರಾದ ಬಾಬುಲಾಲ್ ಪೈಯಾದ್ ದೀಪವನ್ನು ಹಚ್ಚುವುದರ ಮೂಲಕ ಉದ್ಘಾಟಿಸಿ ಮಾತನಾಡಿ, ಈ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿ ಹಬ್ಬವಾಗಿ ಆಚರಣೆಯನ್ನು ಮಾಡಿ, ಹೆಚ್ಚಾಗಿ ಶಬ್ದವನ್ನು ಮಾಡುವಂತ ಹಾಗೂ ಹೆಚ್ಚಾಗಿ ಮಾಲಿನ್ಯವನ್ನು ಉಂಟು ಮಾಡುವಂತ ಪಟಾಕಿಗಳನ್ನು

ಹಚ್ಚ ಬೇಡಿ ಇದರಿಂದ ನಮ್ಮ ಪರಿಸರಕ್ಕೆ ಹಾನಿಯಾಗುವುದ್ದಲ್ಲದೆ ನಮ್ಮ ಸುತ್ತಾ-ಮುತ್ತಲ್ಲಿನ ಪ್ರಾಣಿ ಪಕ್ಷಿಗಳಿಗೂ ಸಹಾ ತೊಂದರೆಯಾಗಲಿದೆ ಅವುಗಳಿಗೆ ತೊಂದರೆಯಾಗದಂತೆ

ನೋಡಿಕೊಳ್ಳುವುದು ನಮ್ಮ ಕರ್ತವ್ಯವಾಗಿದೆ, ಮಕ್ಕಳು ಪಟಾಕಿಯನ್ನು ಹಚ್ಚುವಾಗ ಪೋಷಕರ ಸಹಾಯವನ್ನು ಪಡೆಯಿರಿ ನೀವೇ ಪಟಾಕಿಯನ್ನು ಹಚ್ಚುವಂತ ಕಾರ್ಯಕ್ಕೆ ಹೋಗಬೇಡಿ ಈ ದೀಪಾವಳಿಯನ್ನು ಪರಿಸರ ಸ್ನೇಹಿಯಾಗಿ ಆಚರಣೆಯನ್ನು ಮಾಡಿ ಎಂದು ಮಕ್ಕಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಶಾಲಾ ಕಾರ್ಯದರ್ಶಿ ಸುರೇಶ್ ಕುಮಾರ್, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರಾದ ಶಾಂತ ಕುಮಾರಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯರಾದ ನಾಜೀಮಾ ಸ್ವಾಲೇಹ, ಪ್ರೌಢ ಶಾಲಾ ಮುಖ್ಯಸ್ಥರಾದ ಜನಕರೆಡ್ಡಿ, ಶಾಲೆಯ ಆಡಳಿತ ಮಂಡಳಿ, ಭೋದಕ ಹಾಗೂ ಭೋದಕೇತರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶಾಲೆಯ ಮಕ್ಕಳು ದೀಪಾವಳಿಯ ಹಬ್ಬದ ಅಂಗವಾಗಿ ದೀಪದ ಹಾಡುಗಳಿಗೆ ನೃತ್ಯವನ್ನು ಮಾಡಿದರು.

# ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆ

**ಗದಗ:** 2025-26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವ ಆಯ್ಕೆ ಸ್ಪರ್ಧೆಯನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ, ಲಾಯನ್ಸ್ ಶಿಕ್ಷಣ ಸಂಸ್ಥೆ ಹಾಗೂ ಸನ್ಮಾರ್ಗ ಪದವಿ ಪೂರ್ವ ಮಹಾವಿದ್ಯಾಲಯ, ಗದಗ ಇವರ ಸಹಯೋಗದೊಂದಿಗೆ ಅಕ್ಟೋಬರ್ 25 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸನ್ಮಾರ್ಗ ಪದವಿ ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾಗಿದೆ.

ಸ್ಪರ್ಧೆಗಳ ವಿವರ :

ಸಾಂಸ್ಕೃತಿಕ ಸ್ಪರ್ಧೆ: ಜನಪದ ನೃತ್ಯ ( ತಂಡ) (10 ಜನ ಸ್ಪರ್ಧಾಳುಗಳು) - ಸ್ಪರ್ಧಾ ಸಮಯ 15 ನಿಮಿಷ ; ಜನಪದ ಗೀತೆ ( ತಂಡ ) ಪ್ರಾದೇಶಿಕ ಭಾಷೆ ( 10 ಜನ ಸ್ಪರ್ಧಾಗಳುಗಳು)- ಸ್ಪರ್ಧ ಸಮಯ 7 ನಿಮಿಷ; ಕಥೆ ಬರೆಯುವುದು (ವೈಯಕ್ತಿಕ ) (1000 ಪದಗಳಿಗೆ ಮೀರದಂತೆ ) ಕನ್ನಡ/ ಆಂಗ್ಲ/ ಹಿಂದಿ ಭಾಷೆಯಲ್ಲಿ - ಸ್ಪರ್ಧಾ ಸಮಯ 60 ನಿಮಿಷ; ಚಿತ್ರಕಲೆ (ವೈಯಕ್ತಿಕ) ಎ 3 ಸೈಜ್ 11.7 * 16.5 " 90 ನಿಮಿಷ; ಘೋಷಣೆ ( ವೈಯಕ್ತಿಕ ಸ್ಪರ್ಧೆ) ಆಂಗ್ಲ /ಹಿಂದಿ ಭಾಷೆಯಲ್ಲಿ ಇರಬೇಕು. ಸ್ಪರ್ಧಿಗಳು ಸಿದ್ಧಪಡಿಸಿಕೊಂಡಿರುವ ಆಯ್ದ ವಿಷಯಗಳ ಬಗ್ಗೆ 7 ನಿಮಿಷಗಳು ಭಾಷಣ ಮಾಡಬೇಕು- ಸ್ಪರ್ದಾ ಸಮಯ 7 ನಿಮಿಷ; ಕವಿತೆ ಬರೆಯುವುದು ( ವೈಯಕ್ತಿಕ ) ( 1000 ಪದಗಳಿಗೆ ಮೀರದಂತೆ ) ಕನ್ನಡ / ಆಂಗ್ಲ / ಹಿಂದಿ ಭಾಷೆಯಲ್ಲಿ - ಸ್ಪರ್ಧಾ ಸಮಯ 90 ನಿಮಿಷ.

ಇನೋವೇಷನ್ ಟ್ರಾ ಕ್ : ಎಕ್ಸಿಬಿಷನ್ ಆಫ್ ಸೈನ್ಸ್ ಮೇಳ ( ಗುಂಪು) ರಾಜ್ಯ ಮಟ್ಟದವರಗೆ ಮಾತ್ರ ಆಯೋಜಿಸಲಾಗುವುದು.

ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ 15 ರಿಂದ 29 ವರ್ಷ ವಯೋಮಾನದೊಳಗಿನ ಯುವಜನರನ್ನು ಮಾತ್ರ ಆಧಾರ ಕಾರ್ಡ ಅಥವಾ ಅಧಿಕೃತ ಜನ್ಮ ದಾಖಲೆಗಳನ್ನು ಆಧರಿಸಿ ಆಯ್ಕೆ ಪರಿಗಣಿಸಲಾಗುವುದು. ಭಾಗವಹಿಸುವ ಸ್ಪರ್ಧಾಳುಗಳು ಗದಗ ಜಿಲ್ಲೆಯವರಾಗಿರಬೇಕು ಅಥವಾ ಅನ್ಯ ಜಿಲ್ಲೆಯವರು ಭಾಗವಹಿಸಿದಲ್ಲಿ ಗದಗ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಸಂಸ್ಥೆಯಿಂದ ಗುರುತಿನ ಚೀಟಿ/ ದೃಢೀಕರಣ ಪತ್ರ ಸಲ್ಲಿಸೇಕು. ರಾಷ್ಟ್ರ ಮಟ್ಟದ ಯುವಜನೋತ್ಸವದಲ್ಲಿ ಸತತಾಗಿ ಮೂರು ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೂ ಅಂತಹ ಯುವ ಜನರು ಭಾಗವಹಿಸುವಂತಿಲ್ಲ. ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿರುತ್ತದೆ. ಬಾಗವಹಿಸುವವರು ಅಕ್ಟೋಬರ್ 24 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಗದಗ ಇಲ್ಲಿ ಕಚೇರಿ ವೇಳೆಯಲ್ಲಿ ಬಂದು ಹೆಸರನ್ನು ನೊಂದಾಯಿಸಿಕೊಳ್ಳತಕ್ಕದ್ದು. ಅಥವಾ ಸನ್ಮಾರ್ಗ ಪದವಿ ಪೂರ್ವ ಕಾಲೇಜು, ಮುಂಡರಗಿ ರಸ್ತೆ, ಗದಗ ಇಲ್ಲಿ ನೇರವಾಗಿ ಅಕ್ಟೋಬರ್ 25 ರಂದು ಬೆಳಿಗ್ಗೆ 10 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ಅವಕಾಶ ಒದಗಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಆಯೋಜಿಸುವ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದವರಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು. ರಾಜ್ಯ ಮಟ್ಟಕ್ಕೆ ಪ್ರಥಮ ಸ್ಥಾನ ಪಡೆದವರನ್ನು ಮಾತ್ರ ಕಳುಹಿಸಿಕೊಡಲಾಗುವುದು.

ಭಾಗವಹಿಸುವ ಸ್ಪರ್ಧಾಳುಗಳಿಗೆ ಯಾವುದೇ ರೀತಿಯ ಪ್ರವಾಸ ಭತ್ಯೆ ನೀಡಲಾಗುವುದಿಲ್ಲ. ಮಧ್ಯಾಹ್ನ ಲಘು ಉಪಹಾರದ ವ್ಯವಸ್ತೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದೂರವಾಣಿ ಸಂಖ್ಯೆ 08372-238345 ಸಂಪರ್ಕಿಸಬಹುದಾಗಿದೆ.

# ಪಟಾಕಿ ಸ್ಟಾಲ್‌ಗಳಲ್ಲಿ ಮಕ್ಕಳನ್ನು ಬಳಸದಂತೆ ಸೂಚನೆ

**ಚಿಕ್ಕಮಗಳೂರು:** ದೀಪಾವಳಿ ಪಟಾಕಿ ತಯಾರಿಕೆ ಮಾರಾಟ ಹಾಗೂ ಇತರೆ ಅಪಾಯಕಾರಿ ಉದ್ದಿಮೆಗಳಲ್ಲಿ ಹಾಗೂ ಅಂಗಡಿಗಳಲ್ಲಿ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳದಂತೆ ಕಾರ್ಮಿಕ ಇಲಾಖೆ ಸೂಚಿಸಿದೆ.

ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಷೇಧಿಸಲು ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆ 1986 ತಿದ್ದುಪಡಿ 2016 ಅನ್ನು ಸರ್ಕಾರ ಜಾರಿಗೊಳಿಸಿದೆ. ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಎಲ್ಲಿಯಾದರೂ ಈ ವಯಸ್ಸಿನವರು ನೇಮಕ ಮಾಡಿರುವುದು ಕಂಡು ಬಂದರೆ ಪಟಾಕಿ ಅಂಗಡಿ, ಉದ್ದಿಮೆಗಳ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸಹಾಯಕ ಕಾರ್ಮಿಕ ಆಯುಕ್ತರು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಸದಸ್ಯ ಕಾರ್ಯದರ್ಶಿ ಸುಭಾಷ್ ಎಂ.ಆಲದಕಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಕೂಲ ಹವಾಮಾನ ಲೆಕ್ಕಿಸದೆ ಕೂಡ ಶ್ರೀದೇವಿರಮ್ಮನ ಬೆಟ್ಟಕ್ಕೆ ಭಕ್ತರ ದಂಡು

**ಚಿಕ್ಕಮಗಳೂರು:** ಮಂಜು ಮುಸುಕಿದ ವಾತಾವರಣ, ತಣ್ಣಗೆ ಬೀಸುತ್ತಿರುವ ಗಾಳಿಯ ನಡುವೆಯೂ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಇಂದು ಬೆಟ್ಟವೇರಿ ದೇವಿರಮನ ದರ್ಶನ ಪಡೆದು ಪುನೀತರಾದರು.

ನಿನ್ನೆ ಸುಮಾರು 40 ಸಾವಿರ ಜನ ಭಕ್ತರು ದರ್ಶನ ಪಡೆದಿದ್ದರು. ಇಂದು ಬೆಳಿಗ್ಗೆಯಿಂದಲೇ ರಾಜ್ಯದ ವಿವಿಧ ಜಿಲ್ಲೆಗಳಿಂದ ವಾಹನಗಳಲ್ಲಿ ಆಗಮಿಸುವ ಭಕ್ತರಿಗೆ ಪೊಲೀಸರು ಅಡ್ಡ ಹಾಕಿ ತಮ ವಾಹನಗಳನ್ನು ನಗರದಲ್ಲಿಯೇ ಪಾರ್ಕಿಂಗ್ ಮಾಡಿ ಸರ್ಕಾರಿ ಬಸ್ಸಿನಲ್ಲಿ ಮಲ್ಲೇನಹಳ್ಳಿಗೆ ಪ್ರಯಾಣಿಸಲು ಸೂಚಿಸುತ್ತಿದ್ದರು. ಬೈಕ್‌ನಲ್ಲಿ ಬರುವಂತಹ ಭಕ್ತರಿಗೆ ಮಲ್ಲೇನಹಳ್ಳಿಗೆ ಬಿಡಲಾಗುತ್ತಿತ್ತು.

ನಗರದ ಐಡಿಎಸ್‌ಜಿ ಕಾಲೇಜ್ ಆವರಣ ಹಾಗೂ ಡಿ ಎ ಸಿ ಜಿ ಪಾಲಿಟೆಕ್ನಿಕ್ ಆವರಣ ಹಾಗೂ ಎಂ ಜಿ ರಸ್ತೆ, ಇಂದಿರಾಗಾಂಧಿ ರಸ್ತೆ, ರತ್ನಗಿರಿ ರಸ್ತೆ, ರಾಮನಹಳ್ಳಿ ರಸ್ತೆಗಳಲ್ಲಿ ವಾಹನ ಪಾರ್ಕಿಂಗ್ ಗೆ ವ್ಯವಸ್ಥೆ ಕಲ್ಪಿಸಲಾಗಿತ್ತು. ತಮ ವಾಹನಗಳನ್ನು ಭಕ್ತರು ಪಾರ್ಕಿಂಗ್ ಮಾಡಿ ಸರ್ಕಾರಿ ಬಸ್ ಹತ್ತಿ ಮಲ್ಲೇನಹಳ್ಳಿಗೆ ತಲುಪಿದರು ಭಕ್ತರಿಗೆ ನೂಕು ನುಗ್ಗಲು ಆಗದಂತೆ ಜಿಲ್ಲಾ ಪೊಲೀಸ್ ಮುಖ್ಯ ಅಧಿಕಾರಿ ವಿಕ್ರಮ್ ಅಮಟೆ ನೇತೃತ್ವದಲ್ಲಿ ಪೊಲೀಸ್ ತಂಡ ಅವಿರತವಾಗಿ ಶ್ರಮಿಸಿದೆ.



ರಾತ್ರಿ ಸುರಿದ ಮಳೆಯ ಹಿನ್ನೆಲೆಯಲ್ಲಿ ಬೆಟ್ಟ ಹತ್ತಲು ಭಕ್ತರಿಗೆ ಕಠಿಣವಾಗುತ್ತಿದ್ದ ಸಂದರ್ಭದಲ್ಲಿ ಪೊಲೀಸರು ಹಾಗೂ ಗೃಹರಕ್ಷಕ ದಳ ಸಿಬ್ಬಂದಿ ನಿಂತು ಸ್ನೇಹಮಯ ವಾತಾವರಣದಲ್ಲಿ ಸಹಕರಿಸಿದ್ದು ಗಮನ ಸೆಳೆಯಿತು. ಬೆಟ್ಟದ ಮೇಲೆ ನೆಲೆಸಿರುವ ಶ್ರೀ ದೇವರಮನ ಸನ್ನಿಧಿಯಲ್ಲಿ ಇಂದು ವಿಶೇಷ ಪೂಜೆ , ನೆರವೇರಿತು ಬಂದ ಭಕ್ತರಿಗೆ ಹೂವು, ಕುಂಕುಮ ಪ್ರಸಾದ ವಿನಿಯೋಗ ಮಾಡಲಾಯಿತು.

ಇಂದು ಮಧ್ಯಾಹ್ನದವರೆಗೆ ಬೆಟ್ಟ ಹತ್ತಲು ಹಾಗೂ ದರ್ಶನ ಪಡೆಯಲು ಅವಕಾಶ ಕಲ್ಪಿಸಲಾಗಿತ್ತು ನಾಳೆ ಬೆಳಿಗ್ಗೆ 8 ಗಂಟೆಗೆ ದೇವಾಲಯದಲ್ಲಿ ದೇವಿಗೆ ಉಡುಗೆ ಪೂಜೆ ನೆರವೇರಲಿದೆ ಸಂಜೆ 6.30ಕ್ಕೆ ಬಟ್ಟೆ ಬೆಣ್ಣೆ ಸುಡುವುದು ನಂತರ ಮಹಾಮಂಗಳಾರತಿ ಪ್ರಸಾದ ವಿನಿಯೋಗವಿದೆ

ಅ.22ರಂದು ಬೆಳಿಗ್ಗೆ 8 ಗಂಟೆಗೆ ದೇವಿರಮನವರಿಗೆ ವಿಶೇಷ ಧಾರ್ಮಿಕ ಪೂಜಾ ಕಾರ್ಯಗಳೊಂದಿಗೆ ಮಹಾಮಂಗಳಾರತಿ ಪೂಜಾ ಕಾರ್ಯಕ್ರಮ ನೆರವೇರಲಿದೆ. ಅ. 23ರಂದು ಸೂರ್ಯೋದಯಕ್ಕೆ ಕೆಂಡಾರ್ಚನೆ ನಂತರ ಮಹಾಮಂಗಳಾರತಿ ಹರಕೆ ಒಪ್ಪಿಸುವುದು ತೀರ್ಥ ಪ್ರಸಾದ ವಿನಿಯೋಗ ನೆರವೇರಲಿದೆ.

# ನ.4 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ಚಿಕ್ಕಮಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರೂ ಯುವ ಕೇಂದ್ರದ ಸಹಯೋಗದಲ್ಲಿ ಅಕ್ಟೋಬರ್ 28 ರಂದು ನಿಗದಿಪಡಿಸಲಾಗಿದ್ದ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಮುಂದೂಡಿ ನವೆಂಬರ್ 4 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ.

ಜಿಲ್ಲೆಯ ಎಲ್ಲ ತಾಲ್ಲೂಕುಗಳ ಯುವಜನರಿಗೆ ಜನಪದ ನೃತ್ಯ, ಜನಪದ ಗೀತೆ, ಕಥೆ ಬರೆಯುವುದು, ಕವಿತೆ ಬರೆಯುವುದು, ಘೋಷಣೆ, ಚಿತ್ರಕಲೆ, ವಿಜ್ಞಾನ ಮೇಳ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶವಿದೆ. 15 ರಿಂದ 29ರ ವಯೋಮಿತಿಯ ಎಲ್ಲ ಯುವಕ, ಯುವತಿಯರು ಈ ಸ್ಪರ್ಧಾ ಕಾರ್ಯಕ್ರಮದಲ್ಲಿ ಮುಕ್ತವಾಗಿ ಭಾಗವಹಿಸಬಹುದು. ಆಸಕ್ತ ಯುವಜನರು ತಮ್ಮ ಹೆಸರು, ವಿಳಾಸ, ವಯಸ್ಸಿನ ಪ್ರಮಾಣಪತ್ರ ಸಹಿತ ಭಾಗವಹಿಸುವ ಸ್ಪರ್ಧೆ ವಿವರಗಳೊಂದಿಗೆ ನವೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಯೊಳಗೆ ಕುವೆಂಪು ಕಲಾ ಮಂದಿರದಲ್ಲಿ ವರದಿ ಮಾಡಿಕೊಳ್ಳಲು ಕೋರಲಾಗಿದೆ. ವಿಜೇತರಿಗೆ ಪಾರಿತೋಷಕ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಕಚೇರಿ ವೇಳೆಯಲ್ಲಿ (ದೂರವಾಣಿ ಸಂಖ್ಯೆ:-08262-295724) ಸಂಪರ್ಕಿಸಬಹುದು. ವಿಜ್ಞಾನ ಮೇಳಕ್ಕೆ ಸಂಪರ್ಕಿಸಬೇಕಾದ ಸಂಖ್ಯೆ: 7892442286 ಹಾಗೂ ಚಿತ್ರಕಲೆ ಸ್ಪರ್ಧೆಗೆ ಸಂಪರ್ಕಿಸಬೇಕಾದ ಸಂಖ್ಯೆ: 6360448844 ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪಾಯಕಾರಿ ಉದ್ದಿಮೆಗಳಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ನಿಷೇಧ

**ದಾವಣಗೆರೆ :** ದಾವಣಗೆರೆ ಜಿಲ್ಲಾದ್ಯಂತ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇಧಿಸಲು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆಯನ್ನು ಜಾರಿಗೆ ತಂದಿರುತ್ತದೆ.

ದಾವಣಗೆರೆ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದೆ. ಪಟಾಕಿ ತಯಾರಿಕೆ, ಮಾರಾಟ ಹಾಗೂ ಇತರೆ ಪ್ರಕ್ರಿಯೆಗಳು ಅಪಾಯಕಾರಿ ಉದ್ದಿಮೆಗಳಲ್ಲಿ ಬರುವುದರಿಂದ ಈ ಅಂಗಡಿಗಳಲ್ಲಿ ಯಾವುದೇ ಕಾರಣಕ್ಕೂ 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ, ಬಳಸಿಕೊಳ್ಳದಂತೆ ತಿಳಿಸಲಾಗಿದೆ. ತಪ್ಪಿದಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೆಧ ಮತ್ತು ನಿಯಂತ್ರಣ) ಕಾಯ್ದೆಯ ಕಾನೂನು ಕ್ರಮ ಜರುಗಿಸಲಾಗುವುದೆಂದು ಸಹಾಯಕ ಕಾರ್ಮಿಕ ಆಯುಕ್ತರು ತಿಳಿಸಿದ್ದಾರೆ.

# ಅ.28 ರಂದು ರಾಷ್ಟ್ರೀಯ ಅಪ್ರೆಂಟಿಸ್ ಶಿಪ್ ಮೇಳ

**ಚಿಕ್ಕಮಗಳೂರು:** ನಗರದ ಜಿಲ್ಲಾ ಪಂಚಾಯಿತಿ ಸಮೀಪದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಕ್ಟೋಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ಪ್ರಧಾನ ಮಂತ್ರಿ ರಾಷ್ಟ್ರೀಯ ಅಪ್ರೆಂಟಿಸ್ ಶಿಪ್ ಮೇಳವನ್ನು ಆಯೋಜಿಸಲಾಗಿದೆ. ಈ ಮೇಳದಲ್ಲಿ ಬಿ.ಇ., ಡಿಪ್ಲೊಮಾ, ಪದವಿ, ಪಿ.ಯು.ಸಿ., ಎಸ್.ಎಸ್. ಎಲ್.ಸಿ. ವಿದ್ಯಾರ್ಹತೆ ಹೊಂದಿರುವ ಆಸಕ್ತ ಅರ್ಹ ಅಭ್ಯರ್ಥಿಗಳು ಹಾಗೂ ಐ.ಟಿ.ಐ.ನ ವಿವಿಧ ವೃತ್ತಿಗಳಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಈ ಅಪ್ರೆಂಟಿಶಿಪ್ ಮೇಳದಲ್ಲಿ ತಮ್ಮ ಎಲ್ಲಾ ಮೂಲ ದಾಖಲಾತಿಗಳನ್ನು ಅಧಾರ್ ಸಂಖ್ಯೆ ಮತ್ತು ಇ-ಮೇಲ್ ಐಡಿಯೊಂದಿಗೆ ಹಾಜರಾಗಬಹುದು.

ಈ ಮೇಳದಲ್ಲಿ ವಿವಿಧ ಉದ್ದಿಮೆಗಳು ಪಾಲ್ಗೊಳ್ಳುತ್ತಿದ್ದು, ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳನ್ನು ಅಪ್ರೆಂಟಿಶಿಪ್ ತರಬೇತಿಗೆ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಜಿಲ್ಲೆಯ ಎಲ್ಲ ಉದ್ದಿಮೆಗಳು ಈ ಮೇಳದಲ್ಲಿ ಭಾಗವಹಿಸಿ ತಮ್ಮ ಉದ್ದಿಮೆಯನ್ನು ಅಪ್ರೆಂಟಿಶಿಪ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಲು ಮತ್ತು ಅಪ್ರೆಂಟಿಶಿಪ್ ತರಬೇತಿಗೆ ನೋಂದಣಿ ಮಾಡಿಸಿರುವ ಅಭ್ಯರ್ಥಿಗಳನ್ನು ತಮಗೆ ಅವಶ್ಯಕವಿರುವ ಖಾಲಿ ಸ್ಥಾನಗಳಿಗೆ ಭರ್ತಿಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅಪ್ರೆಂಟಿಶಿಪ್ ಮೇಳದಲ್ಲಿ

ಅರ್ಹ ವಿದ್ಯಾರ್ಹತೆ ಹೊಂದಿರುವ ಎಲ್ಲ ಅಭ್ಯರ್ಥಿಗಳು ಹಾಗೂ ಉದ್ದಿಮೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮೇಳದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ 9611596629, 9964070245, 9480489306, 9886028437, 7411869736, 9972594567, 8553651973, 7019174607 ಹಾಗೂ 8792139703 ಸಂಖ್ಯೆಗಳನ್ನು ಸಂಪರ್ಕಿಸಬಹುದು .

# ಇಂಗ್ಲೆಂಡ್ ವಿರುದ್ಧ ಸೋಲಿನ ಹೊಣೆ ಹೊತ್ತುಕೊಂಡ ಸ್ಮೃತಿ ಮಂಧಾನ

**ಇಂದೋರ್:** ಮಹಿಳಾ ವಿಶ್ವಕಪ್‌ನಲ್ಲಿ ಇಂಗ್ಲೆಂಡ್ ವಿರುದ್ಧದ ನಾಲ್ಕು ರನ್‌ಗಳ ಹೃದಯವಿದ್ರಾವಕ ಸೋಲಿಗೆ ಭಾರತದ ಉಪನಾಯಕಿ ಸ್ಮೃತಿ ಮಂಧಾನಾ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

289 ರನ್‌ಗಳ ಗುರಿಯನ್ನು ಹೊಂದಿದ್ದ ಭಾರತ, ಆರಂಭಿಕ ಆಟಗಾರ್ತಿ ಮಂಧಾನ (88) ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರೊಂದಿಗೆ 125 ಮತ್ತು ದೀಪ್ತಿ ಶರ್ಮಾ ಅವರೊಂದಿಗೆ 67 ರನ್‌ಗಳ ಎರಡು ನಿರ್ಣಾಯಕ ಪಾಲುದಾರಿಕೆಗಳನ್ನು ಗಳಿಸುವ ಮೂಲಕ ಉತ್ತಮ ಹಾದಿಯಲ್ಲಿ ಸಾಗಿತು.




ಆದರೆ ಅವರ ತಪ್ಪಾದ ಸಮಯಕ್ಕೆ ಲಾಫ್‌ಮಾಡಿದ ಶಾಟ್ ಲಾಂಗ್-ಆಫ್ ಮುಳುವಾಯಿತು. ಏಕೆಂದರೆ ರಿಚಾ ಘೋಷಷ್ ನೇರವಾಗಿ ಕವರ್‌ಗೆ ಒಂದನ್ನು ಡ್ರಿಲ್ ಮಾಡಿದರು ಮತ್ತು ನಂತರ, ದೀಪ್ತಿ ಸ್ಲಾಗ್ ಅನ್ನು ತಪ್ಪಿಸಿದರು ಏಕೆಂದರೆ ಭಾರತ ನಿರ್ಣಾಯಕ ವಿಕೆಟ್‌ಗಳನ್ನು ಕಳೆದುಕೊಂಡು ಗುರಿಯನ್ನು ತಲುಪಲು ಕಷ್ಟವಾಯಿತು.

ಆ ಸಮಯದಲ್ಲಿ ಎಲ್ಲರ ಶಾಟ್ ಆಯ್ಕೆಗಳು ನಮ್ಮ ಶಾಟ್ ಆಯ್ಕೆಗಳೊಂದಿಗೆ ನಾವು ಉತ್ತಮವಾಗಿ ಮಾಡಬಹುದಿತ್ತು ಎಂದು ನಾನು ಭಾವಿಸುತ್ತೇನೆ. ವಿಶೇಷವಾಗಿ ಅದು ನನ್ನಿಂದ ಪ್ರಾರಂಭವಾಯಿತು, ಆದ್ದರಿಂದ ಶಾಟ್ ಆಯ್ಕೆ ಉತ್ತಮವಾಗಿರಬೇಕಿತ್ತು ಎಂದು ಹೀಗಾಗಿ ಸೋಲಿನ ಜವಾಬ್ದಾರಿಯನ್ನು ನಾನೇ ತೆಗೆದುಕೊಳ್ಳುತ್ತೇನೆ ಎಂದು ಅವರು ಹೇಳಿದರು.ನಮಗೆ ಪ್ರತಿ ಓವರ್‌ಗೆ ಆರು (ರನ್‌ಗಳು) ಮಾತ್ರ ಬೇಕಾಗಿತ್ತು. ಬಹುಶಃ ನಾವು ಆಟವನ್ನು ಆಳವಾಗಿ ತೆಗೆದುಕೊಳ್ಳಬೇಕಾಗಿತ್ತು. ಕುಸಿತವು ನನ್ನಿಂದಲೇ ಪ್ರಾರಂಭವಾದ ಕಾರಣ ನಾನು ಅದನ್ನು ನನ್ನ ಮೇಲೆ ತೆಗೆದುಕೊಳ್ಳುತ್ತೇನೆ.

ವೈಮಾನಿಕ ಹೊಡೆತಗಳನ್ನು ತಪ್ಪಿಸುವ ತನ್ನದೇ ಆದ ಯೋಜನೆಯಿಂದ ವಿಮುಖಳಾದಾಗ ಭಾವನೆಗಳು ತನ್ನ ಮೇಲೆ ಮೇಲುಗೈ ಸಾಧಿಸಿದವು ಎಂದು ಎಡಗೈ ಆಟಗಾರ್ತಿ ಹೇಳಿದರು.

ನಾವು ಬ್ಯಾಟಿಂಗ್ ಮಾಡುತ್ತಿದ್ದಾಗ ನಾವು ಗೆಲುವು ಸಾಧಿಸಲು ಸಾಧ್ಯವಾಗುತ್ತದೆ ಎಂದು ನನಗೆ ಸಾಕಷ್ಟು ವಿಶ್ವಾಸವಿತ್ತು, ಆದರೆ ಇದು ಕ್ರಿಕೆಟ್, ನೀವು ಎಂದಿಗೂ ಮುಂದೆ ಯೋಚಿಸಲು ಸಾಧ್ಯವಿಲ್ಲ.ಆಸ್ಟ್ರೇಲಿಯಾ ವಿರುದ್ಧದ ಹಿಂದಿನ ಪಂದ್ಯದಲ್ಲಿ ಭಾರತದ ಪ್ರದರ್ಶನದಂತೆಯೇ

ಈ ಕುಸಿತವೂ ಇತ್ತು, ಅಲ್ಲಿ ಅಗ್ರ ಕ್ರಮಾಂಕವು ಘನ ವೇದಿಕೆಯನ್ನು ಒದಗಿಸಿತು, ಮಧ್ಯಮ ಮತ್ತು ಕೆಳ ಕ್ರಮಾಂಕದ ಬ್ಯಾಟ್‌ಮನ್‌ಗಳು ಕುಸಿಯಲು ಮಾತ್ರ.ಆದಾಗ್ಯೂ, ಮಂಧಾನ ಕೂಡ ಬ್ಯಾಟಿಂಗ್ ಘಟಕವನ್ನು ಸಮರ್ಥಿಸಿಕೊಂಡರು.

# ಮೂರು ಬಸ್‌ಗಳ ನಡುವೆ ಭೀಕರ ಅಪಘಾತ, ಇಬ್ಬರು ಮಹಿಳೆಯರು ಸಾವು

**ಮಂಡ್ಯ:** ಜಿಲ್ಲೆಯ ಮಳವಳ್ಳಿ ತಾಲೂಕಿನ ಬಾಚನಹಳ್ಳಿ ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾರಿಗೆ ಸಂಸ್ಥೆ ಬಸ್ ಗಳ ನಡುವೆ ಭೀಕರ ಸರಣಿ ಅಪಘತ ಸಂಭವಿಸಿ ಇಬ್ಬರು ಮಹಿಳೆಯರು ಮೃತಪಟ್ಟಿರುವ ಘಟನೆ ಸಂಜೆ ನಡೆದಿದೆ.

ಕೊಳ್ಳೆಗಾಲ ತಾಲೂಕಿನ ಕರಿಯನಪುರ ಮಹಾದೇವ ಎಂಬುವವರ ಪತ್ನಿ ನಾಗಮ(60) ಹಾಗೂ ಹಲಗಪುರ ಗ್ರಾಮದ ಬಸವಣ್ಣ ಎಂಬುವವರ ಪತ್ನಿ ರತ್ನಮ(46) ಸಾವನ್ನಪ್ಪಿದ್ದು, ಎಪ್ಪತ್ತಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ.

ಇವರಲ್ಲಿ 40ಕ್ಕೂ ಹೆಚ್ಚು ಪ್ರಯಾಣಿಕರನ್ನು ಜಿಲ್ಲೆಯ ವಿವಿಧೆಡೆ ಆಸ್ಪತ್ರೆಗಳಿಗೆ ಹಾಗೂ ಉಳಿದ ಗಾಯಾಳುಗಳನ್ನು ಕೊಳ್ಳೆಗಾಲದ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಕೊಡಿಸಿ ಮೈಸೂರಿಗೆ ರವಾನಿಸಲಾಗಿದೆ. ಇವರ ಪೈಕಿ ಇಬ್ಬರು ಬಸ್ ಚಾಲಕರು ಸೇರಿ ಎಂಟು ಜನರ ಸ್ಥಿತಿ ಚಿಂತಜನಕವಾಗಿದೆ ಎನ್ನಲಾಗಿದೆ.

ಘಟನೆ ವಿವರ: ನಿನ್ನೆ ಸಂಜೆ ಬಾಚನಹಳ್ಳಿ ಸಮೀಪ ಜೋರು ಮಳೆ ಬರುತ್ತಿದ್ದ ಸಂದರ್ಭದಲ್ಲಿ ಕೊಳ್ಳೆಗಾಲ ಕಡೆಯಿಂದ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನ ಚಾಲಕ ರಸ್ತೆಯ ತಿರುವಿನಲ್ಲಿ ಮುಂದೆ ಹೋಗುತ್ತಿದ್ದ ಬೈಕ್ ಹಿಂದಿಕ್ಕಲು ಏಕಾಏಕಿ ಮುನ್ನುಗ್ಗಿದಾಗ ಈ ವೇಳೆ ಎದುರಿನಿಂದ ಬರುತ್ತಿದ್ದ ಮತ್ತೊಂದು ಕೆಎಸ್‌ಆರ್‌ಟಿಸಿ ಬಸ್‌ಗೆ ಮುಖಾಮುಖಿ ಡಿಕ್ಕಿ ಹೊಡೆದಿದೆ.ಈ ಬಸ್ ಹಿಂಬದಿ ಬರುತ್ತಿದ್ದ ಮತ್ತೊಂದು ಬಿಎಂಟಿಸಿ ಬಸ್ ಕೂಡ ಚಾಲಕನ ನಿಯಂತ್ರಣ ಕಳೆದುಕೊಂಡು ಡಿಕ್ಕಿ ಸಂಭವಿಸಿ ಅವಘಡ ಸಂಭವಿಸಿದೆ. ಬಸ್‌ಗಳ ಸರಣಿ ಅಪಘಾತದ ತೀವ್ರತೆಗೆ ಮೂರು ಬಸ್‌ಗಳು ನಜ್ಜುಗುಜ್ಜಾಗಿ ಬಸ್ ಗಳಲ್ಲಿದ್ದ ಬಹಳಷ್ಟು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ.ಘಟನೆಯಿಂದ ಬಸ್‌ನ ಮೂವರು ಚಾಲಕರು ಗಾಯಗೊಂಡರೇ ಇಬ್ಬರು ಚಾಲಕರ ಸ್ಥಿತಿ ಗಂಭೀರವಾಗಿದೆ.ಬಸ್ ಗಳ ಅಪಘಾತದಿಂದ ಒಂದು ಗಂಟೆಗೂ ಹೆಚ್ಚು ಸಮಯ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರ ಅಸ್ತವ್ಯಸ್ತಗೊಂಡಿತ್ತು.

ಅಪಘಾತದ ವಿಷಯ ತಿಳಿಯುತ್ತಿದ್ದಂತೆ ತಾಲೂಕಿನ ಎಲ್ಲಾ ಠಾಣೆಗಳ ಪೊಲೀಸರು ದೌಡಾಯಿಸಿ ವಿವಿಧೆಗಳಿಂದ ಆಂಬ್ಯುಲ್ಸೆ ಮತ್ತು ರಸ್ತೆ ಮಾರ್ಗದಲ್ಲಿ ಬರುವ ವಾನಗಳಲ್ಲೆ ಗಾಯಾಳು ರೋಗಿಗಳನ್ನು ಪಟ್ಟಣದ ತಾಲೂಕು ಆಸ್ಪತ್ರೆಗೆ ಕಳುಹಿಸಿದರು.ವಿಷಯ ತಿಳಿಯುತ್ತಿದ್ದಂತೆ ನೂರಾರು ಸಂಖ್ಯೆಯಲ್ಲಿ ಜನರು ಜಮಾವಣೆಗೊಂಡು ಬಸ್ ಗಳಲ್ಲಿ ಪ್ರಯಾಣ ಮಾಡುತ್ತಿದ್ದವರು ತಮವರೆ ಎಂಬ ವಿಷಯ ತಿಳಿಯಲು ಮುಗಿಬಿದ್ದರು. ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಸಂಜಯ್ ರವರು ರಜೆಯಲ್ಲಿದ್ದ ತಮ ವೈದ್ಯರ ತಂಡವನ್ನು ತುರ್ತಾಗಿ ಆಸ್ಪತ್ರೆಗೆ ಬರಮಾಡಿಕೊಂಡು ಪ್ರಥಮ ಚಿಕಿತ್ಸೆ ನೀಡಿ ಗಂಭೀರವಾಗಿ ಗಾಯಗೊಂಡಿದ್ದ ಪ್ರಯಾಣಿಕರನ್ನು ಆಂಬ್ಯಲೆನ್ಸ್ ಗಳ ಮೂಲಕ ಜಿಲ್ಲಾಸ್ಪತ್ರೆ ಸೇರಿದಂತೆ ವಿವಿಧೆಡೆ ಆಸ್ಪತ್ರೆಗಳಿಗೆ ಕಳುಹಿಸಲಾಯಿತು.

# ಹೆಲಿ ಟ್ಯೂಸರಿಂಗೆ ಚಾಲನೆ

**ಹಾಸನ :** ಹಾಸನ ನಗರದ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ ಇಲಾಖೆ, ಹಾಸನ ವತಿಯಿಂದ ಅ.10 ರಿಂದ ಅ.22 ರವರೆಗೆ ನಗರದ ಚನ್ನಪಟ್ಟಣ ಕೆರೆ ಅಂಗಳದಲ್ಲಿರುವ ಹೆಲಿಪ್ಯಾಡ್ ಬಳಿ ಏರ್ಪಡಿಸಲಾಗಿದ್ದ ಹೆಲಿಟ್ಯೂಸರಿಂಗೆ ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಭೈರೇಗೌಡಅವರುಉದ್ಘಾಟಿಸಿದರು.ನಂತರ ಪೋಸ್ಟರ್ ಬಿಡುಗಡೆ ಮಾಡಿದರು.

ಈ ವೇಳೆಯಲ್ಲಿಜಿಲ್ಲಾಧಿಕಾರಿಕೆ.ಎಸ್ ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿಡಾ. ಪೂರ್ಣಿಮಾಬಿ. ಆರ್, ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಮತ್ತಿತರರು ಹಾಜರಿದ್ದರು.

# ಅರ್ಜಿ ಆಹ್ವಾನ

**ದಾವಣಗೆರೆ :** ದಾವಣಗೆರೆ ತಾಲ್ಲೂಕು ಕಸಬಾ ಹೋಬಳಿ ಉತ್ತರ ವೃತ್ತದ ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳವರು ಅಗತ್ಯ ದಾಖಲಾತಿಗಳ ವಿವರಗಳನ್ನು ಅಕ್ಟೋಬರ್ 29 ರೊಳಗೆ ದಾವಣಗೆರೆ ತಾಲ್ಲೂಕು ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ತಾಲ್ಲೂಕು ಕಚೇರಿಯನ್ನು ಸಂಪರ್ಕಿಸಬೇಕೆಂದು ತಹಶೀಲ್ದಾರ್ ಅಶ್ವಥ್ ತಿಳಿಸಿದ್ದಾರೆ.

# ಗಣೇಶ್‌ಗೆ ಮಾಳವಿಕಾ ಶರ್ಮಾ ಜೋಡಿ ಸ್ಯಾಂಡಲ್‌ವುಡ್‌ಗೆ ಪದಾರ್ಪಣೆ





ಕೃಷ್ಣಂ ಪ್ರಣಯ ಸಖಿ’ ಚಿತ್ರದ ಯಶಸ್ವಿ ಸಹಯೋಗದ ನಂತರ ಗೋಲ್ಡನ್ ಸ್ಟಾರ್ ಗಣೇಶ್ ಮತ್ತೊಮ್ಮೆ ನಿರ್ದೇಶಕ ಶ್ರೀನಿವಾಸ್ ರಾಜು ಅವರೊಂದಿಗೆ ಕೈಜೋಡಿಸುತ್ತಿದ್ದಾರೆ. ಆಗಸ್ಟ್‌ನಲ್ಲಿ ಸೆಟ್ಟೇರಿದ ಇನ್ನೂ ಹೆಸರಿಡದ ಈ ಚಿತ್ರವನ್ನು ಸಮೃದ್ಧಿ ಮಂಜುನಾಥ್ ಅವರ ಕೆವಿಸಿ ಪ್ರೊಡಕ್ಷನ್ಸ್ ಮತ್ತು ವಿರಾಟ್ ಸಾಯಿ ಕ್ರಿಯೇಷನ್ಸ್ ಪ್ರಸ್ತುತಪಡಿಸುತ್ತಿದ್ದು, ಈಗಾಗಲೇ ಚಿತ್ರದ ಶೇ 60ರಷ್ಟು ಚಿತ್ರೀಕರಣವನ್ನು ಪೂರ್ಣಗೊಳಿಸಿದೆ.

ಚಿತ್ರದಲ್ಲಿ ಇಬ್ಬರು ನಾಯಕಿಯರು ಇರಲಿದ್ದಾರೆ. ದೇವಿಕಾ ಭಟ್ ಅಧಿಕೃತವಾಗಿ ಚಿತ್ರತಂಡ ಸೇರ್ಪಡೆಗೊಂಡಿದ್ದರೆ, ಮಾಳವಿಕಾ ಶರ್ಮಾ ಈ ಚಿತ್ರದ ಮೂಲಕ ಕನ್ನಡಕ್ಕೆ ಪದಾರ್ಪಣೆ ಮಾಡಲಿದ್ದಾರೆ ಎನ್ನಲಾಗಿದೆ. ಮೂಲತಃ ವಕೀಲ ವೃತ್ತಿಯಿಂದ ಮಾಡೆಲ್ ಆಗಿ ಬದಲಾದ ಮಾಳವಿಕಾ, ತೆಲುಗು ಮತ್ತು ತಮಿಳು ಚಿತ್ರಗಳಾದ ನೆಲ ಟಿಕೆಟ್ (2018), ರೆಡ್ (2021), ಕಾಫಿ ವಿತ್ ಕಾದಲ್ (2022), ಭೀಮಾ (2024) ಮತ್ತು ಹರೋಮ್ ಹರಾ (2024) ಚಿತ್ರಗಳಲ್ಲಿ ನಟಿಸಿದ್ದಾರೆ. ನಟಿ ಈ ತಿಂಗಳು ಚಿತ್ರೀಕರಣದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ.

ಕೇರಳ, ಉತ್ತರ ಭಾರತ ಮತ್ತು ಭೂತಾನ್‌ನ ಸುಂದರವಾದ ಸ್ಥಳಗಳಲ್ಲಿ ಚಿತ್ರೀಕರಣ ನಡೆಸಲು ಯೋಜನೆ ರೂಪಿಸಲಾಗಿದ್ದು, ಈಗಾಗಲೇ ಮೈಸೂರಿನ ಹಲವು ಸ್ಥಳಗಳಲ್ಲಿ ಚಿತ್ರೀಕರಿಸಲಾಗಿದೆ.

ರೊಮ್ಯಾಂಟಿಕ್ ಚಿತ್ರಗಳಿಗೆ ಹೆಸರಾದ ಗಣೇಶ್ ಈ ಚಿತ್ರದ ಮೂಲಕ ಹೊಸ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಅವರು ಸಂಗೀತ, ಕೃಷಿ ಮತ್ತು ಪ್ರಕೃತಿಯೊಂದಿಗೆ ಆಳವಾದ ಸಂಪರ್ಕವನ್ನು ಹೊಂದಿರುವ ಬೌದ್ಧಿಕ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ.

ಚಿತ್ರಕ್ಕೆ ವೆಂಕಟ್ ಪ್ರಸಾದ್ ಅವರ ಛಾಯಾಗ್ರಹಣ, ಹೇಶಮ್ ಅಬ್ದುಲ್ ವಹಾಬ್ ಅವರ ಸಂಗೀತ ಸಂಯೋಜನೆ ಇದೆ. ವಿಜಯ್ ಈಶ್ವರ್ ಮತ್ತು ಕ್ರಾಂತಿ ಕುಮಾರ್ ಸಂಭಾಷಣೆ ಬರೆದಿದ್ದಾರೆ. ಚಿತ್ರದ ಚಿತ್ರೀಕರಣ ಭರದಿಂದ ಸಾಗುತ್ತಿದ್ದು, 2026ರ ಆರಂಭದಲ್ಲಿ ಬಿಡುಗಡೆ ಮಾಡುವ ಗುರಿಯನ್ನು ಚಿತ್ರತಂಡ ಹೊಂದಿದೆ. 2025ರಲ್ಲಿ ನಟ ಗಣೇಶ್ ಅವರ ಯಾವುದೇ ಚಿತ್ರ ಬಿಡುಗಡೆಯಾಗಿಲ್ಲ.

ಈಮಧ್ಯೆ, ಗಣೇಶ್ ವಿಖ್ಯಾತ್ ನಿರ್ದೇಶನದ ‘ಜಠಣಢಿ’ ಖಟಿಛಿಜಡಿಜಟಥಿ ರಾಮ್’ ಮತ್ತು ಧನಂಜಯ್ ಜೊತೆಗಿನ ಪಿನಾಕಾ ಸೇರಿದಂತೆ ಇತರ ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ.

# ಕರಾವಳಿ ಕರ್ನಾಟಕ ಸೊಗಡಿನ ‘ಕೊರಗಜ್ಜ’ ಆರು ಭಾಷೆಗಳಲ್ಲಿ ಬಿಡುಗಡೆಗೆ ಸಜ್ಜು; ನವೆಂಬರ್‌ನಲ್ಲಿ ತೆರೆಗೆ

**ಕಾಂತಾರ:** ಚಾಪ್ಟರ್ 1 ಯಶಸ್ಸಿನ ನಂತರ, ಕರಾವಳಿ ಕರ್ನಾಟಕದ ಉತ್ಸಾಹ ಮತ್ತು ಸಂಪ್ರದಾಯದಲ್ಲಿ ಬೇರೂರಿರುವ ಮತ್ತೊಂದು ಚಿತ್ರ ಬಿಡುಗಡೆಗೆ ಸಜ್ಜಾಗಿದೆ. ಸಕ್ಸಸ್ ಫಿಲ್ಮ್ಸ್ ಮತ್ತು ತ್ರಿವಿಕ್ರಮ್ ಸಿನಿಮಾಸ್ ಬ್ಯಾನರ್ ಅಡಿಯಲ್ಲಿ ತ್ರಿವಿಕ್ರಮ್ ಸಪಲ್ಯ ನಿರ್ಮಿಸಿದ, ಸುಧೀರ್ ಅತ್ತಾವರ ಅವರ ನಿರ್ದೇಶನದ ಕೊರಗಜ್ಜ ಇದೀಗ ಆರು ಭಾಷೆಗಳಲ್ಲಿ ಬಿಡುಗಡೆಯಾಗಲು ಸಜ್ಜಾಗಿದೆ. ಚಿತ್ರವು ನವೆಂಬರ್ 28 ರಂದು ದೇಶದಾದ್ಯಂತ ಚಿತ್ರಮಂದಿರಗಳಲ್ಲಿ ತೆರೆಗೆ ಬರಲಿದೆ.

ಚಿತ್ರದ ಫಸ್ಟ್ ಲುಕ್ ಟೀಸರ್ ಮತ್ತು 3ಡಿ ಮೋಷನ್ ಪೋಸ್ಟರ್ ಅನ್ನು ಇತ್ತೀಚೆಗೆ ನಡೆದ ಭವ್ಯ ಸಮಾರಂಭದಲ್ಲಿ ಅನಾವರಣಗೊಳಿಸಲಾಯಿತು. ಅದು ಕರಾವಳಿ ಕರ್ನಾಟಕದ ಸಾರವನ್ನು ಸುಂದರವಾಗಿ ಪ್ರತಿಬಿಂಬಿಸುತ್ತದೆ.

ಕಾರ್ಯಕ್ರಮವು ದಕ್ಷಿಣ ಕನ್ನಡದ ವಾದ್ಯ ಮೇಳ ಮತ್ತು ಉಡುಪಿಯ ಮಹಿಳೆಯರ ಹುಲಿ ವೇಷವನ್ನು ಒಳಗೊಂಡ ರೋಮಾಂಚಕ ಮೆರವಣಿಗೆಯೊಂದಿಗೆ ಪ್ರಾರಂಭವಾಯಿತು. ಕೊರಗಜ್ಜನ ಎರಡು ಬೃಹತ್ ಕಟೌಟ್‌ಗಳನ್ನು ಅನಾವರಣಗೊಳಿಸಲಾಯಿತು. ಸಮಾರಂಭದಲ್ಲಿ ಮಾಜಿ ಸಚಿವೆ ಮೋಟಮ್ಮ, ನಿರ್ಮಾಪಕಿ-ನಿರ್ದೇಶಕಿ ವಿಜಯಲಕ್ಷ್ಮಿ ಸಿಂಗ್, ನಿರ್ದೇಶಕ ಸುಧೀರ್ ಅತ್ತಾವರ, ನಿರ್ಮಾಪಕ ತ್ರಿವಿಕ್ರಮ್ ಸಪಲ್ಯ ಸೇರಿದಂತೆ ಗಣ್ಯರು ಹಾಗೂ ಚಿತ್ರತಂಡದವರು ಪುಷ್ಪ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ಸುಧೀರ್ ಅತ್ತಾವರ್, ಮೂರು ವರ್ಷಗಳ ಹಿಂದೆ ಚಿತ್ರದ ಪಯಣ ಆರಂಭವಾಗಿ ಹಲವಾರು ಸವಾಲುಗಳ ನಂತರ ಮುಕ್ತಾಯಗೊಂಡಿತು. ರಾಷ್ಟ್ರಪ್ರಶಸ್ತಿ ವಿಜೇತ ನಿರ್ಮಾಪಕ ವಿದ್ಯಾಧರ್ ಶೆಟ್ಟಿ ಕಾರ್ಯಕಾರಿ ನಿರ್ಮಾಪಕರಾಗಿ ಮತ್ತು ತ್ರಿವಿಕ್ರಮ್ ಸಪಲ್ಯ ನಿರ್ಮಿಸಿರುವ ಈ ಚಿತ್ರವನ್ನು ರಾಜಿ ಮಾಡಿಕೊಳ್ಳದೆ ನಿರ್ಮಿಸಲಾಗಿದೆ ಎಂದರು.





ಕೊರಗಜ್ಜ ಚಿತ್ರದಲ್ಲಿ 31 ಹಾಡುಗಳಿದ್ದು, ಗೋಪಿ ಸುಂದರ್ ಸಂಯೋಜಿಸಿದ್ದಾರೆ. ಹಾಡುಗಳನ್ನು ಭಾರತದಾದ್ಯಂತದ ಕಲಾವಿದರು ಹಾಡಿದ್ದಾರೆ. ಎರಡು ದಶಕಗಳ ಹಿಂದೆ ದೈವತ್ವವನ್ನು ಪಡೆದ ಕೊರಗಜ್ಜನ ಆಧ್ಯಾತ್ಮಿಕ ಪ್ರಯಾಣವನ್ನು ಚಿತ್ರ ತೆರೆ ಮೇಲೆ ತರಲಿದೆ.

ನಿರ್ಮಾಪಕ ತ್ರಿವಿಕ್ರಮ್ ಸಪಲ್ಯ ಅವರು ಸುಧೀರ್ ಅತ್ತಾವರ್ ಅವರೊಂದಿಗಿನ ತಮ್ಮ ದೀರ್ಘಕಾಲದ ಸ್ನೇಹ ಮತ್ತು ಅವರ ಕುಟುಂಬದ ಕೊರಗಜ್ಜನ ಭಕ್ತಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲು ಪ್ರೇರೇಪಿಸಿತು. ಅನುಭವಿ ನಟರು ಮತ್ತು ತಂತ್ರಜ್ಞರನ್ನು ಒಟ್ಟುಗೂಡಿಸಿರುವ ಚಿತ್ರವು ನವೆಂಬರ್ ಅಂತ್ಯದ ವೇಳೆಗೆ ಬಿಡುಗಡೆಯಾಗಲಿದೆ ಎಂದು ಅವರು ಹೇಳಿದರು.

ಈ ಚಿತ್ರವನ್ನು ಮೂಲತಃ ಜೈ ಜಗದೀಶ್ ಅವರು ವರ್ಷಗಳ ಹಿಂದೆ ಪ್ರಾರಂಭಿಸಿದರು. ಆದರೆ, ನಂತರ ನಿರ್ದೇಶಕ ಸುಧೀರ್ ಅತ್ತಾವರ ಅವರ ಕೈಗೆ ಬಂದಿತು ಎಂದು ಹಿರಿಯ ಚಲನಚಿತ್ರ ನಿರ್ಮಾಪಕಿ ವಿಜಯಲಕ್ಷ್ಮಿ ಸಿಂಗ್ ಹಂಚಿಕೊಂಡರು. ಫಸ್ಟ್-ಲುಕ್ ಈವೆಂಟ್‌ನ ಭವ್ಯತೆಯು ಚಿತ್ರದ ದೊಡ್ಡ ಪ್ರಮಾಣದ ಮತ್ತು ಮಹತ್ವಾಕಾಂಕ್ಷೆಯ ದೃಷ್ಟಿಯನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು.

ರಾಣಿ ಪಂಜಂಡಾಯಿ ಪಾತ್ರದಲ್ಲಿ ನಟಿಸಿರುವ ನಟಿ ಭವ್ಯಾ ಅವರು ಚಿತ್ರದ ಭಾಗವಾಗಿರುವುದಕ್ಕೆ ಮತ್ತು ಕಬೀರ್ ಬೇಡಿ ಅವರೊಂದಿಗೆ ಕೆಲಸ ಮಾಡಿದ್ದು ಮರೆಯಲಾಗದ ಅನುಭವ ಎಂದರು.

ಕೊರಗಜ್ಜನ ಸಾಕು ತಾಯಿಯಾಗಿ ನಟಿಸಿರುವ ನಟಿ ಶ್ರುತಿ, ಅತ್ಯಂತ ದೀರ್ಘ ಮತ್ತು ತೀವ್ರವಾದ ದೃಶ್ಯಕ್ಕಾಗಿ 28 ಗಂಟೆಗಳ ಚಿತ್ರೀಕರಣದಲ್ಲಿ ತೊಡಗಿಕೊಂಡಿದ್ದಾಗಿ ಹೇಳಿದರು. ನಿರ್ದೇಶಕರ ಸಮರ್ಪಣೆಯನ್ನು ಶ್ಲಾಘಿಸಿದ ಅವರು, ಕೊರಗಜ್ಜನ ಆಶೀರ್ವಾದದೊಂದಿಗೆ ಚಿತ್ರವು ಭಾರತದಾದ್ಯಂತದ ಪ್ರೇಕ್ಷಕರೊಂದಿಗೆ ಸಂಪರ್ಕ ಸಾಧಿಸುತ್ತದೆ ಎಂದು ಭರವಸೆ ವ್ಯಕ್ತಪಡಿಸಿದರು.

## ದಾಂಪತ್ಯ ಜೀವನಕ್ಕೆ ಕಾಲಿಡುತ್ತಿರುವ ರಘು ದೀಕ್ಷಿತ್ ವಾರಿಜಾಶ್ರೀ ವೇಣುಗೋಪಾಲ್



ಖ್ಯಾತ ಸಂಗೀತ ನಿರ್ದೇಶಕ ರಘು ದೀಕ್ಷಿತ್ ಮತ್ತು ಗಾಯಕಿ ವಾರಿಜಾಶ್ರೀ ವೇಣುಗೋಪಾಲ್ ಅವರು ಈ ತಿಂಗಳ ಕೊನೆಯಲ್ಲಿ ವಿವಾಹ ಬಂಧನಕ್ಕೊಳಗಾಗಲಿದ್ದಾರೆ.ಬಹುಭಾಷಾ ಜಾನಪದ ಸಂಗೀತಕ್ಕೆ ಹೆಸರುವಾಸಿಯಾದ ಗಾಯಕ ರಘು ದೀಕ್ಷಿತ್ ಗ್ರ್ಯಾಮಿ-ನಾಮನಿರ್ದೇಶಿತ ಸಂಗೀತಗಾರ್ತಿ ಕೊಳಲು ವಾದಕಿ ವಾರಿಜಾಶ್ರೀ ವೇಣುಗೋಪಾಲ್ ಅವರು ಜೀವನದ ಹೊಸ ಅಧ್ಯಾಯಕ್ಕೆ ಕಾಲಿಡಲು ಉತ್ಸುಕರಾಗಿದ್ದಾರೆ.ಸಂಗೀತ ಸಹಯೋಗದಿಂದ ಪ್ರೀತಿಗೆ

ಈ ಇಬ್ಬರು ಸಂಗೀತ ಕಲಾವಿದರ ಪ್ರೀತಿ ಪ್ರೇಮ ಪ್ರಣಯ ‘ಸಾಕು ಇನ್ನೂ ಸಾಕು’ ನಲ್ಲಿನ ಸಂಗೀತ ಸಹಯೋಗದೊಂದಿಗೆ ಪ್ರಾರಂಭವಾಯಿತು, ಸ್ನೇಹ ಕ್ರಮೇಣ ಪ್ರೀತಿಗೆ ತಿರುಗಿತು.ಈ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿರುವ ರಘು ದೀಕ್ಷಿತ್ ನನ್ನ ಜೀವನದಲ್ಲಿ ಹೊಸ ಅಧ್ಯಾಯ ಆರಂಭವಾಗುತ್ತದೆ ಎಂದು ನಾನು ನಿರೀಕ್ಷಿಸಿರಲಿಲ್ಲ. ಇದೆಲ್ಲಾ ಆಕಸ್ಮಿಕವಾಗಿ ಹುಟ್ಟಿಕೊಂಡಿತು. ವಾರಿಜಾಶ್ರೀ ಅವರ ಪೋಷಕರ ಆಶೀರ್ವಾದದೊಂದಿಗೆ, ನಮ್ಮ ಜೀವನದ ಈ ಹೊಸ ಅಧ್ಯಾಯವನ್ನು ಒಟ್ಟಿಗೆ ಪ್ರಾರಂಭಿಸಲು ನಾವು ಉತ್ಸುಕರಾಗಿದ್ದೇವೆ ಎಂದು ಹೇಳಿದ್ದಾರೆ.ರಘು ದೀಕ್ಷಿತ್ ಹಾಗೂ ವಾರಿಜಶ್ರೀ ವೇಣುಗೋಪಾಲ್ ಅವರು ಸಾಕಷ್ಟು ವಿಡಿಯೊ ಸಾಂಗ್ ಆಲ್ಬಂಗಳಲ್ಲಿ ಒಟ್ಟಿಗೆ ಕೆಲಸ ಮಾಡಿದ್ದಾರೆ. ಕೋವಿಡ್ ಸಮಯದಲ್ಲಿ ಅವರು ಹಾಡಿದ್ದ ‘ಭರವಸೆಯ ಬದುಕು’ ವಿಡಿಯೋ ಸಾಂಗ್ ಬದುಕಿನಲ್ಲಿ ಸಾಕಷ್ಟು ನೋವುಂಡವರಿಗೆ ಆತ್ಮವಿಶ್ವಾಸ ತುಂಬುವ ರೀತಿ ಇದೆ.ಖ್ಯಾತ ನೃತ್ಯ ಕಲಾವಿದೆ ಮಯೂರಿ ಉಪಾಧ್ಯಾಯ ಅವರನ್ನು ವಿವಾಹವಾಗಿದ್ದ ರಘು ದೀಕ್ಷಿತ್ ಕೆಲವು ವರ್ಷಗಳ ಹಿಂದೆ ಭಿನ್ನಾಭಿಪ್ರಾಯ ತಲೆದೋರಿ ವಿಚ್ಛೇದನ ಪಡೆದಿದ್ದರು.

## ಬೆಳ್ಳಿ ಪರದೆ ಮೇಲೆ ಬರಲಿದೆ ಪೂರ್ಣಚಂದ್ರ ತೇಜಸ್ವಿ ಅವರ ಕಾದಂಬರಿ ‘ಜುಗಾರಿ ಕ್ರಾಸ್’; ಪ್ರಮುಖ ಪಾತ್ರದಲ್ಲಿ ರಾಜ್ ಬಿ ಶೆಟ್ಟಿ!





ಹಲವು ವರ್ಷಗಳ ನಿರೀಕ್ಷೆಯ ನಂತರ, ಕೆಪಿ ಪೂರ್ಣಚಂದ್ರ ತೇಜಸ್ವಿ ಅವರ ಮೆಚ್ಚುಗೆ ಪಡೆದ ಕಾದಂಬರಿ ‘ಜುಗಾರಿ ಕ್ರಾಸ್’ ಕೊನೆಗೂ ದೊಡ್ಡ ಪರದೆಯಲ್ಲಿ ಬರಲು ಸಿದ್ಧವಾಗುತ್ತಿದೆ. ನಿರ್ದೇಶಕ ಗುರುದತ್ತ ಗಾಣಿಗ ಅವರು ಜುಗಾರಿ ಕ್ರಾಸ್ ಅನ್ನು ತೆರೆ ಮೇಲೆ ತರಲು ಸಜ್ಜಾಗುತ್ತಿದ್ದಾರೆ. ಚಿತ್ರದಲ್ಲಿ ರಾಜ್ ಬಿ ಶೆಟ್ಟಿ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಗುರುದತ್ ಅವರು ಅಂಬಿ ನಿಂಗೆ ವಯಸ್ಸಾಯ್ತೋ ಚಿತ್ರದ ಮೂಲಕ ನಿರ್ದೇಶಕರಾಗಿ ಪದಾರ್ಪಣೆ ಮಾಡಿದರು ಮತ್ತು ಸದ್ಯ ಪ್ರಜ್ವಲ್ ದೇವರಾಜ್ ನಟನೆಯ ಕರಾವಳಿ ಚಿತ್ರ ಬಿಡುಗಡೆಗೆ ತಯಾರಿ ನಡೆಸುತ್ತಿದ್ದಾರೆ.

ಅನೇಕ ನಿರ್ದೇಶಕರು ಅನೇಕ ವರ್ಷಗಳಿಂದ ಜುಗಾರಿ ಕ್ರಾಸ್‌ಗೆ ಜೀವ ತುಂಬಲು ಪ್ರಯತ್ನಿಸಿದ್ದಾರೆ. ಆದರೆ, ಇದೀಗ ಗುರುದತ್ ಗಾಣಿಗ ಮತ್ತು ರಾಜ್ ಬಿ ಶೆಟ್ಟಿ ಈ ಬಹುದಿನಗಳ ಕನಸನ್ನು ನನಸು ಮಾಡುತ್ತಿರುವುದು ಚಿತ್ರಪ್ರೇಮಿಗಳಲ್ಲಿ ಉತ್ಸಾಹ ಮೂಡಿಸಿದೆ. ಜುಗಾರಿ ಕ್ರಾಸ್ ಕಾದಂಬರಿಯು ಅದರ ಸಸ್ಪೆನ್ಸ್ ನಿರೂಪಣೆ, ಲೇಯರ್ಡ್ ಕಥೆ ಹೇಳುವಿಕೆ ಮತ್ತು ಒಳಸಂಚು ಮತ್ತು ಅಪಾಯವನ್ನು ಬೆರೆಸುವ ತಿರುವುಗಳಿಗೆ ಹೆಸರುವಾಸಿಯಾಗಿದೆ.

ರಾಜ್ ಬಿ ಶೆಟ್ಟಿ ಅವರು ಒಂದು ಮೊಟ್ಟೆಯ ಕಥೆ, ಗರುಡ ಗಮನ ವೃಷಭ ವಾಹನ ಮತ್ತು ಇತ್ತೀಚೆಗೆ ಬಿಡುಗಡೆಯಾದ

ಸು ಫ್ರಮ್ ಸೋ ಚಿತ್ರದಲ್ಲಿನ ಅಭಿನಯಕ್ಕಾಗಿ ಹೆಸರುವಾಸಿಯಾಗಿದ್ದಾರೆ.

ಚಿತ್ರದ ಸಸ್ಪೆನ್ಸ್ ಪ್ರಪಂಚದ ಬಗ್ಗೆ ಸುಳಿವು ನೀಡುವ ಟೀಸರ್ ಬಿಡುಗಡೆಯಾಗಿದೆ. ಟೀಸರ್ ತಲೆಬರುಡೆಗಳನ್ನು ತೋರಿಸಿದ್ದು, ಈಗಲೇ ತೀವ್ರ ನಿರೀಕ್ಷೆ ಹುಟ್ಟುಹಾಕುವಂತಿದೆ.

ಈ ಯೋಜನೆಯು ಗುರುದತ್ತ ಗಾಣಿಗ ಮತ್ತು ರಾಜ್ ಬಿ ಶೆಟ್ಟಿ ನಡುವಿನ ಎರಡನೇ ಸಹಯೋಗವನ್ನು ಗುರುತಿಸುತ್ತದೆ. ಶೀಘ್ರದಲ್ಲೇ ಬಿಡುಗಡೆಯಾಗಲಿರುವ ಕರಾವಳಿಯಲ್ಲಿಯೂ ರಾಜ್ ಬಿ ಶೆಟ್ಟಿ ನಟಿಸಿದ್ದಾರೆ. ಜುಗಾರಿ ಕ್ರಾಸ್ ಚಿತ್ರಕ್ಕೆ ಅಭಿಮನ್ಯು ಸದಾನಂದನ್ ಅವರ ಛಾಯಾಗ್ರಹಣ ಮತ್ತು ಸಚಿನ್ ಬಸ್ರೂರ್ ಅವರ ಸಂಗೀತವಿದೆ.

ಶೀಘ್ರದಲ್ಲೇ ಚಿತ್ರೀಕರಣ ಪ್ರಾರಂಭವಾಗಲಿದ್ದು, ಮುಂಬರುವ ವಾರಗಳಲ್ಲಿ ತಾರಾಗಣದ ಬಗ್ಗೆ ಪ್ರಕಟಣೆಗಳನ್ನು ನಿರೀಕ್ಷಿಸಲಾಗಿದೆ.

## ರೂಪೇಶ್ ಶೆಟ್ಟಿ ನಿರ್ದೇಶಿಸಿ, ನಟಿಸಿರುವ ‘ಜೈ’ ಬಿಡುಗಡೆ

ಬಿಗ್ ಬಾಸ್ ಕನ್ನಡ ವಿಜೇತ ಮತ್ತು ಕರಾವಳಿ ಕರ್ನಾಟಕದ ಅತ್ಯಂತ ಜನಪ್ರಿಯ ಮುಖಗಳಲ್ಲಿ ಒಬ್ಬರಾದ ರೂಪೇಶ್ ಶೆಟ್ಟಿ ನಿರ್ದೇಶಿಸಿ, ನಟಿಸಿರುವ ‘ಜೈ’ ಚಿತ್ರವು ಬಿಡುಗಡೆಗೆ ಸಿದ್ಧವಾಗಿದ್ದು, ರಾಜ್ಯದಾದ್ಯಂತ ನವೆಂಬರ್ 14 ರಂದು ಚಿತ್ರಮಂದಿರಗಳಲ್ಲಿ ತೆರೆಕಾಣಲಿದೆ. ಕನ್ನಡ ಮತ್ತು ತುಳು ಭಾಷೆಯಲ್ಲಿ ತಯಾರಾಗಿರುವ ಚಿತ್ರದಲ್ಲಿ ರೂಪೇಶ್ ಶೆಟ್ಟಿಗೆ ಜೋಡಿಯಾಗಿ ಅದ್ವಿತಿ ಶೆಟ್ಟಿ ನಟಿಸಿದ್ದಾರೆ. ಬಾಲಿವುಡ್ ನಟ ಸುನೀಲ್ ಶೆಟ್ಟಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.



ಚಿತ್ರರಂಗದ ನಿಜ ಜೀವನದ ಜೋಡಿಗಳಾದ ಸಂಗೀತ ನಿರ್ದೇಶಕ ಗುರುಕಿರಣ್ ಮತ್ತು ಅವರ ಪತ್ನಿ, ನಿರೂಪಕ ನಿರಂಜನ್ ದೇಶಪಾಂಡೆ ಮತ್ತು ಅವರ ಪತ್ನಿ, ಬಿಗ್ ಬಾಸ್ ಸ್ಪರ್ಧಿ ವಿನಯ್ ಗೌಡ ಮತ್ತು ಅವರ ಪತ್ನಿ, ರೂಪೇಶ್ ರಾಜಣ್ಣ ಮತ್ತು ಅವರ ಪತ್ನಿ ಮತ್ತು ಆರ್ಯವರ್ಧನ್ ಗುರೂಜಿ ಮತ್ತು ಅವರ ಪತ್ನಿ ಚಿತ್ರದ ರೊಮ್ಯಾಂಟಿಕ್ ಟ್ರ್ಯಾಕ್ ‘ಲವ್ ಯೂ’ ಬಿಡುಗಡೆ ಮಾಡಿದರು. ಈ ವೇಳೆ ಚಿತ್ರದ ಬಿಡುಗಡೆ ದಿನಾಂಕವನ್ನು ಘೋಷಿಸಲಾಗಿದೆ.

ಲವ್ ಯೂ’ ಹಾಡು ಹಲವಾರು ತಿಂಗಳುಗಳ ಪರಿಷ್ಕರಣೆಯನ್ನು ತೆಗೆದುಕೊಂಡಿತು. ಆರನೇ ಆವೃತ್ತಿ ಫೈನಲ್ ಆಯಿತು. ಇದು ಭಾವನೆ ಮತ್ತು ಲಯವನ್ನು ಸಂಪೂರ್ಣವಾಗಿ ಸಮತೋಲನಗೊಳಿಸಿದ ಒಂದು ಮಧುರವಾದ ಹಾಡಾಗಿದೆ. ಹಾಡನ್ನು ರಜತ್ ಹೆಗ್ಡೆ ಹಾಡಿದ್ದಾರೆ. ರೂಪೇಶ್ ತುಳು ಆವೃತ್ತಿಗೆ ಸಾಹಿತ್ಯ ಬರೆದರೆ, ಕೀರ್ತನ್ ಭಂಡಾರಿ ಅದನ್ನು ಕನ್ನಡಕ್ಕೆ ತಂದಿದ್ದಾರೆ.

ಅದ್ವಿತಿ ಶೆಟ್ಟಿ ಈ ಚಿತ್ರದಲ್ಲಿ ಪತ್ರಕರ್ತೆಯಾಗಿ ನಟಿಸಿದ್ದಾರೆ. ತುಳು ಚಿತ್ರರಂಗದಲ್ಲಿ ಇದು ಅವರ ಚೊಚ್ಚಲ ಚಿತ್ರವಾಗಿದೆ. ಈ ಯೋಜನೆಯು ಕನ್ನಡ ಮತ್ತು ತುಳು ಉದ್ಯಮಗಳೆರಡರಲ್ಲೂ ಕೆಲಸ ಮಾಡುತ್ತಿರುವ ರೂಪೇಶ್ ಅವರಿಗೆ ಮಹತ್ವದ ಹೆಜ್ಜೆಯಾಗಿದೆ.

## ಅಘೋರಿಗಳ ವಿಸ್ಮಯ ಪ್ರಪಂಚದಲ್ಲಿ ಭೈರಾದೇವಿ


ರಾಧಿಕಾ ಕುಮಾರಸ್ವಾಮಿ ಅಭಿನಯದ ಬಹುನಿರೀಕ್ಷಿತ ಚಿತ್ರ ಭೈರಾದೇವಿ ಬಿಡುಗಡೆಯಾಗಿದೆ. ಶ್ರೀಜೈ ನಿರ್ದೇಶನದ ಈ ಸಿನಿಮಾವು ಅಘೋರಿಗಳು ದೆವ್ವ ಮತ್ತು ದೇವರ ಬಗೆಗಿನ ಕಥೆಯಾಗಿದೆ.

ರಾಧಿಕಾ ಅಘೋರಿ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಸಿನಿಮಾದಲ್ಲಿ ಕಾಶಿ ಹಾಗೂ ಮಣಿಕರ್ಣಿಕಾ ಘಾಟ್ ದರ್ಶನವೂ ಆಗುತ್ತೆ. ಜೊತೆಗೆ ಅಘೋರಿಗಳ ಲೈಫ್‌ಸ್ಟೈಲಿನ ಪರಿಚಯವೂ ಆಗುತ್ತದೆ. ಯಾವ ತೆಲುಗು ಸಿನಿಮಾಕ್ಕೂ ಕಡಿಮೆ ಇಲ್ಲದ ಹಾಗೆ ಬಹಳ ರಿಚ್ ಆಗಿ ಅಘೋರಿ ಲೈಫನ್ನು ತೋರಿಸಿದ್ದಾರೆ. ಬಹುತೇಕ ಕೌಟುಂಬಿಕ, ಪ್ರೀತಿ, ಪ್ರೇಮ ಕಥೆಗಳಲ್ಲಿ ನಟಿಸಿದ್ದ ರಾಧಿಕಾ ಕುಮಾರಸ್ವಾಮಿ ಹೊಸದೊಂದು ಪಾತ್ರದಲ್ಲಿ ಅಭಿನಯಿಸಿದ್ದಾರೆ, ಅವರ ಸಿನಿಮಾಗಳ ಮಟ್ಟಿಗೆ ಇದೊಂದು ಹೊಸ ಪ್ರಯೋಗವಾಗಿದೆ.

ಚಿತ್ರದ ಶಕ್ತಿಯು ಅದರ ಶೀರ್ಷಿಕೆಯಲ್ಲಿ ಮಾತ್ರವಲ್ಲ ಕಥೆಯಲ್ಲಿಯೂ ಅಡಗಿದೆ. ಪ್ರಬಲವಾದ ಕಥಾವಸ್ತುವನ್ನು ಒಳಗೊಂಡಿರುವ ಭೈರಾದೇವಿ ಸಿನಿಮಾದಲ್ಲಿ ಪ್ರತಿಯೊಬ್ಬರ ಪಾತ್ರ ಅದ್ಭುತವಾಗಿದೆ.

ಪೊಲೀಸ್ ಅಧಿಕಾರಿಯಾಗಿರುವ ಅರವಿಂದ್ ಗೆ (ರಮೇಶ್ ಅರವಿಂದ್) ತನ್ನ ಮೃತ ಹೆಂಡತಿಯ ಆತ್ಮ ದೆವ್ವದಿಂದ ಕಾಡುತ್ತದೆ. ಆಕೆ ದುರಂತವೊಂದರಲ್ಲಿ ತನ್ನ ಪ್ರಾಣ ತ್ಯಜಿಸಿರುತ್ತಾಳೆ.

## Oscar ರೇಸ್ ಗೆ ‘ಮಹಾವತಾರ್ ನರಸಿಂಹ’ ಚಿತ್ರ!, ಹೊಂಬಾಳೆ ಫಿಲ್ಮ್ಸ್ ಮಾಸ್ಟರ್ ಪ್ಲಾನ್?



**ಬೆಂಗಳೂರು:** ಈ ಹಿಂದೆ ಬಿಡುಗಡೆಯಾಗಿದ್ದ ಕನ್ನಡದ ಮೊಟ್ಟ ಮೊದಲ ಆ್ಯನಿಮೇಟೆಡ್ ಚಿತ್ರ ‘ಮಹಾವತಾರ್ ನರಸಿಂಹ’ ಚಿತ್ರ ಬಾಕ್ಸಾಫಿಸ್ ದಾಖಲೆಯ ಬಳಿಕ ಇದೀಗ ಮತ್ತೊಂದು ಮೈಲಿಗಲ್ಲಿನತ್ತ ಸಾಗಿದೆ.ಹೌದು.. ಈ ಚಿತ್ರವನ್ನು ನಿರ್ಮಾಣ ಮಾಡಿದ್ದ ಹೊಂಬಾಳೆ ಫಿಲ್ಮ್ಸ್ ಇದೀಗ ಈ ಚಿತ್ರವನ್ನು ಆಸ್ಕರ್ ಪ್ರಶಸ್ತಿ ರೇಸ್ ಗೆ ಕಳುಹಿಸಲು ಮುಂದಾಗಿದೆ. ಈಗಾಗಲೇ ಈ ಚಿತ್ರವನ್ನು ಪ್ರಶಸ್ತಿ ಪರಿಗಣನೆಗೆ ಸಲ್ಲಿಸಿದೆ ಎಂದು ತಿಳಿದುಬಂದಿದೆ. ಈಗಾಗಲೇ ರಿಷಬ್ ಶೆಟ್ಟಿ ನಿರ್ದೇಶನದ ಕಾಂತಾರ: ಅಧ್ಯಾಯ 1 ಚಿತ್ರವನ್ನು ಆಸ್ಕರ್ ಪರಿಗಣನೆಗೆ ಕಳುಹಿಸಲಾಗಿದ್ದು ಇದರ ಬೆನ್ನಲ್ಲೇ ಹೊಂಬಾಳೆ ಫಿಲ್ಮ್ಸ್, ಅಶ್ವಿನ್ ಕುಮಾರ್ ನಿರ್ದೇಶಿಸಿದ ಮತ್ತು ಸ್ಟುಡಿಯೋ ಪ್ರಸ್ತುತಪಡಿಸಿದ 2ಆ ಮತ್ತು 3ಆ ಅನಿಮೇಟೆಡ್ ಚಿತ್ರ ಮಹಾವತಾರ್ ನರಸಿಂಹ ಚಿತ್ರವನ್ನು ಆಸ್ಕರ್ ಪ್ರಶಸ್ತಿ ಪರಿಗಣನೆಗೆ ಕಳುಹಿಸಲಾಗಿದೆ.ಕ್ಲೀಮ್ ಪ್ರೊಡಕ್ಷನ್ಸ್ ಅಡಿಯಲ್ಲಿ ಶಿಲ್ಪಾ ಧವನ್, ಕುಶಾಲ್ ದೇಸಾಯಿ ಮತ್ತು ಚೈತನ್ಯ ದೇಸಾಯಿ ನಿರ್ಮಿಸಿದ ಈ ಚಿತ್ರವು ವಿಶ್ವಾದ್ಯಂತ 300 ಕೋಟಿ ರೂ.ಗಳಿಗೂ ಹೆಚ್ಚು ಗಳಿಸಿದ್ದು, ಭಾರತದ ಅತಿ ಹೆಚ್ಚು ಗಳಿಕೆಯ ಅನಿಮೇಟೆಡ್ ಚಿತ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿತ್ತು. ಇದರ ಬಹುಭಾಷಾ ಆಕರ್ಷಣೆಯು ಜಾಗತಿಕ ವೇದಿಕೆಯಲ್ಲಿ ವೈವಿಧ್ಯಮಯ ಭಾರತೀಯ ಕಥೆಗಳನ್ನು ಹಂಚಿಕೊಳ್ಳುವ ಸ್ಟುಡಿಯೋದ ಬದ್ಧತೆಯನ್ನು ಒತ್ತಿಹೇಳುತ್ತದೆ.

## ತೆಲುಗು ಚಿತ್ರದತ್ತ ಮುಖ ಮಾಡಿದ ರಿಷಭ್ ಶೆಟ್ಟಿ

### ಕಾಂತಾರ: ಚಾಪ್ಟರ್ 2 ಮಾಡುವ ಬಗ್ಗೆ ಮಹತ್ವದ ಅಪ್ಡೇಟ್!

ಅಕ್ಟೋಬರ್ 2ರಂದು ಬಿಡುಗಡೆಯಾದ ಕಾಂತಾರ: ಚಾಪ್ಟರ್ 1 ಗಲ್ಲಾಪೆಟ್ಟಿಗೆಯಲ್ಲಿ ಭರ್ಜರಿ ಓಟವನ್ನು ಮುಂದುವರಿಸಿದ್ದು, ನಟ, ನಿರ್ದೇಶಕ ರಿಷಬ್ ಶೆಟ್ಟಿ ಇದೀಗ ರಿಲ್ಯಾಕ್ಸ್ ಮೂಡ್‌ನಲ್ಲಿದ್ದಾರೆ. ಇತ್ತೀಚೆಗಷ್ಟೇ ಮೈಸೂರಿಗೆ ಭೇಟಿ ನೀಡಿದ್ದ ನಟ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಮಾಧ್ಯಮಗಳೊಂದಿಗೆ ಮಾತನಾಡಿ, ತಮ್ಮ ಮುಂದಿನ ಯೋಜನೆ ‘ಜೈ ಹನುಮಾನ್’ ಬಗ್ಗೆ ವಿವರಗಳನ್ನು ಬಹಿರಂಗಪಡಿಸಿದರು.

ಮುಂಬರುವ ಚಿತ್ರವನ್ನು ಪ್ರಶಾಂತ್ ವರ್ಮಾ ನಿರ್ದೇಶಿಸಲಿದ್ದಾರೆ ಮತ್ತು ಮೈತ್ರಿ ಮೂವಿ ಮೇಕರ್ಸ್ ನಿರ್ಮಿಸಲಿದೆ ಎಂದು ನಟ ಮತ್ತು ನಿರ್ದೇಶಕರು ಖಚಿತಪಡಿಸಿದ್ದಾರೆ. ‘ಹೌದು, ನನ್ನ ಮುಂದಿನ ಚಿತ್ರ ಜೈ ಹನುಮಾನ್. ಇದು ಸದ್ಯ ನಾನು ಕೆಲಸ ಮಾಡುತ್ತಿರುವ ಏಕೈಕ ಯೋಜನೆಯಾಗಿದೆ. ಕಾಂತಾರ: ಚಾಪ್ಟರ್ 2 ಮಾಡುವ ಬಗ್ಗೆ ತಕ್ಷಣಕ್ಕೆ ಯಾವುದೇ ನಿರ್ಧಾರ ಕೈಗೊಂಡಿಲ್ಲ’ ಎಂದು ಸ್ಪಷ್ಟಪಡಿಸಿದರು.

ಜೈ ಹನುಮಾನ್ ತೆಲುಗಿನಲ್ಲಿ ಚಿತ್ರೀಕರಣವಾಗಲಿದ್ದು, ರಿಷಬ್ ಹನುಮನ ಪಾತ್ರದಲ್ಲಿ ನಟಿಸಲಿದ್ದಾರೆ. ‘ಈ ಕಥೆ ನನ್ನ ಹೃದಯಕ್ಕೆ ತುಂಬಾ ಹತ್ತಿರವಾಗಿದೆ. ನನಗೆ ದೈವಿಕತೆಯ ಮೇಲೆ ಅಪಾರ ನಂಬಿಕೆ ಇದೆ ಮತ್ತು ಈ ಚಿತ್ರವು ಆ ನಂಬಿಕೆಯನ್ನು ಪ್ರತಿಬಿಂಬಿಸುತ್ತದೆ. ನನ್ನ ಸೃಜನಶೀಲ ಪಯಣದ ಪ್ರತಿಯೊಂದು ಹೆಜ್ಜೆಯೂ ಭಕ್ತಿ ಮತ್ತು ಶಿಸ್ತಿನಿಂದ ಪ್ರೇರಿತವಾಗಿರುತ್ತದೆ’ ಎಂದು ಅವರು ಹೇಳಿದರು.



2022ರಲ್ಲಿ ತೆರೆಕಂಡ ಬ್ಲಾಕ್ ಬಸ್ಟರ್ ಚಿತ್ರ ಕಾಂತಾರದ ಪ್ರೀಕ್ವೆಲ್ ಕಾಂತಾರ: ಚಾಪ್ಟರ್ 1 ಆಗಿದ್ದು, ರಿಷಭ್ ಜೊತೆಗೆ ರುಕ್ಮಿಣಿ ವಸಂತ್ ನಾಯಕಿಯಾಗಿ ನಟಿಸಿದ್ದಾರೆ. ಇದರೊಂದಿಗೆ ಜಯರಾಮ್ ಮತ್ತು ಗುಲ್ಶನ್ ದೇವಯ್ಯ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

## ಅಬ್ಬಬ್ಬಾ ರೋಮಾಂಚನ: ಅದ್ಭುತ ಸೃಷ್ಟಿಸಿದ ರಿಷಬ್ ಶೆಟ್ಟಿಗೆ ರಾಷ್ಟ್ರಪ್ರಶಸ್ತಿ ಕೊಡಲೇಬೇಕು- ತಮಿಳು ನಿರ್ದೇಶಕ ಅಟ್ಲೀ

ಇಡೀ ಭಾರತ ಕಾಂತಾರ ಅಧ್ಯಾಯ 1 ಬಗ್ಗೆ ಮಾತನಾಡುತ್ತಿದೆ. ದಕ್ಷಿಣ ಭಾರತೀಯ ಚಿತ್ರರಂಗದಲ್ಲಿ ಕನ್ನಡ ಚಿತ್ರಗಳು ಯಾವಾಗಲೂ ತಮ್ಮದೇ ಆದ ವಿಮರ್ಶಕರು ಮತ್ತು ಅಭಿಮಾನಿಗಳನ್ನು ಹೊಂದಿರುತ್ತವೆ. ಕೆಜಿಎಫ್ ಚಿತ್ರದ ನಂತರ ಭಾರತದಲ್ಲಿ ಕನ್ನಡ ಚಿತ್ರಗಳ ಮೇಲೆ ಪ್ರತ್ಯೇಕ ದೃಷ್ಟಿಕೋನವನ್ನು ಸೃಷ್ಟಿಸಲಾಗಿದೆ. ಈ ಪರಿಸ್ಥಿತಿಯಲ್ಲಿ ಕನ್ನಡ ಚಲನಚಿತ್ರೋದ್ಯಮವನ್ನು ಮತ್ತೊಮ್ಮೆ ವಿಶೇಷ ಗಮನ ಸೆಳೆದ ಚಿತ್ರ ಕಾಂತಾರ. ಈಗ ಕಾಂತಾರ ಅಧ್ಯಾಯ 1 ಬಿಡುಗಡೆಯಾಗಿದ್ದು, ಬಾಕ್ಸ್ ಆಫೀಸ್ ಕೊಳ್ಳೆ ಹೊಡೆಯುತ್ತಿದೆ. ಈ ಚಿತ್ರವನ್ನು ನೋಡಿದ ನಿರ್ದೇಶಕ ಅಟ್ಲೀ, ರಿಷಭ್ ಶೆಟ್ಟಿಗೆ ರಾಷ್ಟ್ರೀಯ ಪ್ರಶಸ್ತಿ ನೀಡಬೇಕು ಎಂದು ಹೇಳಿದ್ದಾರೆ.ಕಾಂತಾರ ಅಧ್ಯಾಯ 1 ಅಕ್ಟೋಬರ್ 2 ರಂದು ಬಿಡುಗಡೆಯಾಗಿದ್ದು ಯಶಸ್ವಿಯಾಗಿ ಪ್ರದರ್ಶನಗೊಳ್ಳುತ್ತಿದೆ. ಕಳೆದ ಒಂದು ವಾರದಲ್ಲಿಯೇ ಚಿತ್ರವು ವಿಶ್ವಾದ್ಯಂತ 509.25 ಕೋಟಿ ರೂ.ಗಳಿಗೂ ಹೆಚ್ಚು ಸಂಗ್ರಹಿಸಿದೆ ಎಂದು ಚಿತ್ರತಂಡ ತಿಳಿಸಿದೆ. ಈ ಮಾಹಿತಿ ಕನ್ನಡ ಚಿತ್ರೋದ್ಯಮವನ್ನು ಸಂತೋಷಪಡಿಸಿದೆ. ಏತನ್ಮಧ್ಯೆ, ಕಾಂತಾರ ಚಿತ್ರದ ಬಗ್ಗೆ ಮಾತನಾಡಿರುವ ಅಟ್ಲೀ, ಕಾಂತಾರ ಚಿತ್ರದ ನಿರ್ದೇಶಕ ಮತ್ತು ನಟ ರಿಷಭ್ ಶೆಟ್ಟಿಗೆ ರಾಷ್ಟ್ರೀಯ ಪ್ರಶಸ್ತಿ ಕೊಡಲೇಬೇಕು ಎಂದು ಹೇಳಿದರು.ನಾನು ಕಾಂತಾರ ಅಧ್ಯಾಯ 1 ಚಿತ್ರವನ್ನು ನೋಡಿದೆ. ನನಗೆ ಚಿತ್ರ ತುಂಬಾ ಇಷ್ಟವಾಯಿತು. ಚಿತ್ರ ನೋಡಿದ ನಂತರ, ನಾನು ನಿರ್ದೇಶಕ ಮತ್ತು ನಟ ರಿಷಭ್ ಶೆಟ್ಟಿ ಅವರಿಗೆ ಕರೆ ಮಾಡಿ ಅಭಿನಂದಿಸಿದೆ. ಒಂದೇ ಕಾಲಕ್ಕೆ ನಟನೆ ಮತ್ತು ನಿರ್ದೇಶನ ಕಂಡು ನನಗೆ ಆಶ್ಚರ್ಯವಾಯಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



**ಶ್ರೀ ಸಿದ್ದರಾಮಯ್ಯ**
ಮಾನ್ಯ ಮುಖ್ಯಮಂತ್ರಿಗಳು

# ಪೊಲೀಸ್ ಸಂಸ್ಮರಣ ದಿನಾಚರಣೆ

21 ಅಕ್ಟೋಬರ್, 2025



**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು




## ಪೊಲೀಸ್ ಹುತಾತ್ಮರಿಗೆ ಹೃತ್ಪೂರ್ವಕ ನಮನ

ಪೊಲೀಸರ ಸೇವೆ ಅನುಪಮವಾದುದು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು, ರೋಗರುಜಿನ ಮುಂತಾದ ಸಾಂಕ್ರಾಮಿಕ ಸಂಕಷ್ಟದ ಸಂದರ್ಭದಲ್ಲಿ ಜನತೆಗೆ ನೆರವು ನೀಡಲು, ಸಮಾಜದಲ್ಲಿ ಶಾಂತಿ ಕಾಪಾಡಲು, ಸಮಾಜ ಘಾತುಕ ಶಕ್ತಿಗಳನ್ನು ನಿಯಂತ್ರಿಸಲು ನಮ್ಮ ಪೊಲೀಸರು ತಮ್ಮ ಜೀವದ ಹಂಗನ್ನು ತೊರೆದು ಅಹರ್ನಿಶಿ ಶ್ರಮಿಸುವರು. ಈ ನಮ್ಮ ಪೊಲೀಸರ ನಿಸ್ವಾರ್ಥ ಸೇವೆ, ಧೈರ್ಯ ಮತ್ತು ಸಾಹಸ ಶ್ಲಾಘನೀಯ. ಇಂತಹ ಮಹತ್ತರವಾದ ಕಾರ್ಯದಲ್ಲಿ ನಿರತವಾಗಿದ್ದ ಸಂದರ್ಭದಲ್ಲಿಯೇ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ನಿದರ್ಶನಗಳು ಬಹಳ.

**ಇಂತಹ ಮಹಾನ್ ತ್ಯಾಗಿಗಳ ಸಂಸ್ಮರಣೆ ಮಾಡುತ್ತಾ, ಎಲ್ಲಾ 8 ಹುತಾತ್ಮರಿಗೆ ನಾವು ಇಂದು ಮನಃಪೂರ್ವಕವಾಗಿ ಗೌರವ ಸಮರ್ಪಿಸೋಣ.**



**ಮುಖ್ಯ ಅತಿಥಿಗಳು**
**ಶ್ರೀ ಸಿದ್ದರಾಮಯ್ಯ**
ಮಾನ್ಯ ಮುಖ್ಯಮಂತ್ರಿಗಳು

**ಅಧ್ಯಕ್ಷತೆ**
**ಡಾ॥ ಜಿ. ಪರಮೇಶ್ವರ**
ಮಾನ್ಯ ಗೃಹ ಸಚಿವರು

**ಕಾರ್ಯಕ್ರಮ**
**ದಿನಾಂಕ : 21-10-2025**
ಮಂಗಳವಾರ ಬೆಳಗ್ಗೆ 8-00 ಗಂಟೆಗೆ,
**ಸ್ಥಳ: ಹುತಾತ್ಮರ ಉದ್ಯಾನವನ**
ನಗರ ಸಶಸ್ತ್ರ ಮೀಸಲು ಪಡೆ ಕೇಂದ್ರಸ್ಥಾನ,
ಮೈಸೂರು ರಸ್ತೆ, ಬೆಂಗಳೂರು.

**ಕರ್ನಾಟಕದ 8 ಜನ ಪೊಲೀಸ್ ಹುತಾತ್ಮರು**

| ಕ್ರಮ ಸಂ | ಶ್ರೀಯುತರು | ಹುದ್ದೆ ಮತ್ತು ಮೆಟಲ್ ಸಂಖ್ಯೆ | ಜಿಲ್ಲೆ/ಘಟಕ |
|---|---|---|---|
| 1. | ಶ್ರೀ ಮೆಬೂಬು ಗುಡ್ಡಲಿಲ್ | ಪಿಎಸ್ಐ | ಬೆಂಗಳೂರು ನಗರ |
| 2. | ಶ್ರೀ ವೆಂಕಟಾಚಲಪತಿ ಕೆ.ಎನ್ | ಎಎಸ್ಐ | ಕೆಜಿಎಫ್ |
| 3. | ಶ್ರೀ ಗಿರೀಶ್.ಎಸ್ | ಎಆರ್ಎಸ್ಐ | ಡಿಎಆರ್, ತುಮಕೂರು ಜಿಲ್ಲೆ |
| 4. | ಶ್ರೀ ಬಸವರಾಜ ಎಂ. | ಸಿಹೆಚ್‌ಸಿ-287 | ಬೆಂಗಳೂರು ಜಿಲ್ಲೆ |
| 5. | ಶ್ರೀ ನಿಂಗರಾಜ್ ಟಿ. ಎಸ್. | ಎಹೆಚ್‌ಸಿ-90 | ಡಿಎಆರ್, ತುಮಕೂರು ಜಿಲ್ಲೆ |
| 6. | ಶ್ರೀ ಪ್ರಕಾಶ್.ಬಿ.ಯು | ಸ್ಪೆ ಆರ್‌ಹೆಚ್‌ಸಿ-36 | 11 ನೇ ಪಡೆ ಕೆ.ಎಸ್.ಆರ್.ಪಿ, ಹಾಸನ |
| 7. | ಶ್ರೀ ಮಹೇಶ್.ಎನ್.ಆರ್ | ಹೆಚ್‌ಸಿ-6713 | ಬೆಂಗಳೂರು ನಗರ |
| 8. | ಶ್ರೀ ರಾಮಪ್ಪ ಪೂಜಾರಿ | ಎಪಿಸಿ-104 | ಡಿಎಆರ್, ದಾವಣಗೆರೆ ಜಿಲ್ಲೆ |

**ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು (ಪೊಲೀಸ್ ಪಡೆಯ ಮುಖ್ಯಸ್ಥರು), ಕರ್ನಾಟಕ ರಾಜ್ಯ, ಹಾಗೂ ರಾಜ್ಯದ ಸಮಸ್ತ ಪೊಲೀಸ್ ಅಧಿಕಾರಿಗಳು**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**